ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 29 ▪ ಪುಟ : 04 ▪ ಬೆಲೆ : 02 ▪ 04-07-2026 ▪ ಶನಿವಾರ ▪ ಬಳ್ಳಾರಿ

# ಗಣಿನಾಡವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ
9743034347
9900966891

2 ಸಹಕಾರಿ ಸಂಘಗಳು ಪ್ರತಿಯೊಬ್ಬರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಶ್ರಮಿಸುವುದು

3 ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಮನವಿ

4 ಸೋಯಾಬೀನ್ ಕೃಷಿಗೆ ಉತ್ತೇಜನ ನೀಡಲು ರೈತ ಸಂಘದ ಮನವಿ

## ಮಂತ್ರಾಲಯದ ಶ್ರೀರಾಘವೇಂದ್ರ ಮಠಕ್ಕೆ ಭೇಟಿ ನೀಡಿದ ಶಾಸಕ ನಾರಾ ಭರತ್ ರೆಡ್ಡಿ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿ ಅವರು ಶುಕ್ರವಾರ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು.

ಶಾಸಕ ನಾರಾ ಭರತ್ ರೆಡ್ಡಿಯವರು ಮಠಕ್ಕೆ ಭೇಟಿ ನೀಡಿದ ಸಂದರ್ಭ ಮಠದ ಶ್ರೀ ಸುಭುದೇಂದ್ರ ತೀರ್ಥರಿಂದ ದಿವ್ಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಕಟ್ಟೆಮನೆ ನಾಗೇಂದ್ರ, ಹಿರಿಯ ಕಾಂಗ್ರೆಸ್ ನಾಯಕರು ಅಸುಂಡಿ ಹೊನ್ನರಪ್ಪ, ಪರಶುರಾಮುಡು, ಹೊನ್ನಪ್ಪ, ಹಗರಿ ಗೋವಿಂದ, ಗುಂತಕಲ್ ಸುರೇಶ್, ನಾಯ್ಡು ಹಾಗೂ ಇತರ ಹಲವು ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.

ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸಿ, ವಿಶೇಷ ಪ್ರಾರ್ಥನೆ ಮಾಡಿದ ಶಾಸಕ ನಾರಾ ಭರತ್ ರೆಡ್ಡಿ ಅವರು, ಜನರ ಕಲ್ಯಾಣ ಮತ್ತು ಬಳ್ಳಾರಿ ಅಭಿವೃದ್ಧಿಗಾಗಿ ಪಕ್ಷವು ಸತತ ಪ್ರಯತ್ನ ಮಾಡುತ್ತಿದೆ ಎಂದು ತಿಳಿಸಿದರು.

ಈ ಭೇಟಿಯು ಆಧ್ಯಾತ್ಮಿಕ ಶಕ್ತಿಯನ್ನು ಹೆಚ್ಚಿಸಿದೆ ಎಂದು ತಿಳಿಸಿದರು.

## ಸುಸ್ಥಿರ ನಾಳೆಗಾಗಿ ಜಲ ಮತ್ತು ವಿದ್ಯುತ್ ಸಂರಕ್ಷಣೆ ಇಂದಿನ ಅಗತ್ಯ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಭೂಮಿ ಹಾಗೂ ನಮ್ಮ ಭವಿಷ್ಯವನ್ನು ಸುರಕ್ಷಿತವಾಗಿಡಲು ಜಲ ಮತ್ತು ವಿದ್ಯುತ್ ಸಂರಕ್ಷಣೆ ಅತ್ಯಂತ ಅಗತ್ಯವಾಗಿದ್ದು, ಸಾರ್ವಜನಿಕರು ದೈನಂದಿನ ಜೀವನದಲ್ಲಿ ಸಣ್ಣ ಬದಲಾವಣೆಗಳನ್ನು ಮಾಡಿಕೊಳ್ಳುವ ಮೂಲಕ ಈ ನೈಸರ್ಗಿಕ ಸಂಪನ್ಮೂಲಗಳನ್ನು ಉಳಿಸಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಕರೆ ನೀಡಿದ್ದಾರೆ.

ನೀರನ್ನು ಉಳಿಸುವುದು ಎಂದರೆ ವಿದ್ಯುತ್ ಅನ್ನು ಸಹ ಉಳಿಸುವುದಾಗಿದೆ. ಏಕೆಂದರೆ ನೀರನ್ನು ಶುದ್ಧೀಕರಿಸಿ ಮನೆಗಳಿಗೆ ಪೂರೈಸಲು ಹೆಚ್ಚಿನ ವಿದ್ಯುತ್ ಬಳಸಲಾಗುತ್ತದೆ. ಹಾಗಾಗಿ ಈ ಸಂಪನ್ಮೂಲಗಳನ್ನು ಸಂರಕ್ಷಿಸುವ ಬಗ್ಗೆ ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಹೇಳಿದ್ದಾರೆ.

**ಎಲ್ ನಿನೊ ಹವಾಮಾನ ವೈಪರೀತ್ಯ ಮತ್ತು ಜಲಕ್ಷಾಮದ ಭೀತಿ:** ಪ್ರತಿಯೊಬ್ಬ ಜೀವಿಯ ಬದುಕಿಗೆ ನೀರು ಅತ್ಯಗತ್ಯವಾಗಿದ್ದು, ಭೂಮಿಯ ಶೇಕಡಾ 70 ರಷ್ಟು ಭಾಗ ನೀರಿನಿಂದ ಕೂಡಿದ್ದರೂ, ಕುಡಿಯಲು ಯೋಗ್ಯವಾದ ಸಿಹಿ ನೀರು ಇರುವುದು ಕೇವಲ ಶೇಕಡಾ 2 ರಷ್ಟು ಮಾತ್ರ. ವೇಗವಾದ ನಗರೀಕರಣ, ಜನಸಂಖ್ಯೆಯ ಹೆಚ್ಚಳ, ಮಾಲಿನ್ಯ ಮತ್ತು ಜವಾಬ್ದಾರಿರಹಿತ ಬಳಕೆಯಿಂದಾಗಿ ಜಲಕ್ಷಾಮವು ಇಂದು ಜಾಗತಿಕ ಸಮಸ್ಯೆಯಾಗಿ ಪರಿಣಮಿಸಿದೆ.

ಇತ್ತೀಚಿನ ದಿನಗಳಲ್ಲಿ ಎಲ್ ನಿನೊ ಹವಾಮಾನ ವೈಪರೀತ್ಯದ ಪರಿಣಾಮದಿಂದ ವಿಶ್ವದಾದ್ಯಂತ ಸಾಮಾನ್ಯ ಹವಾಮಾನ ಮಾದರಿಗಳು ವ್ಯತ್ಯಯಗೊಳ್ಳುತ್ತಿವೆ. ದೇಶದಲ್ಲಿ ಅತಿವೃಷ್ಟಿ, ಪ್ರವಾಹ ಮತ್ತು ಬರಗಾಲದಂತಹ ತೀವ್ರ ಪರಿಸ್ಥಿತಿಗಳು ಎದುರಾಗುತ್ತಿದ್ದು,ಮಳೆಯಕೊರತೆಯುಂಟಾಗುತ್ತಿದೆ.



ಇದು ನೇರವಾಗಿ ನಮ್ಮ ರೈತರ ಕೃಷಿ ಉತ್ಪಾದನೆ ಮತ್ತು ಪರಿಸರ ವ್ಯವಸ್ಥೆಯ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ ಜೀವಜಲವಾದ ನೀರನ್ನು ಉಪಯೋಗಿಸುವಾಗ ನಾಗರಿಕರು ತೀವ್ರ ಎಚ್ಚರಿಕೆ ವಹಿಸಬೇಕಾಗಿದೆ.

**ನೀರು ಉಳಿಸಲು ಪ್ರಮುಖ ಮಾರ್ಗೋಪಾಯಗಳು:** 'ನೀರನ್ನು ಮಿತವಾಗಿ ಬಳಸಿ, ಪ್ರಕೃತಿಯನ್ನು ರಕ್ಷಿಸಿ' ಎಂಬ ಧ್ಯೇಯದೊಂದಿಗೆ ಪ್ರತಿಯೊಬ್ಬ ನಾಗರಿಕನೂ ಸಣ್ಣ ಪ್ರಮಾಣದಲ್ಲಿ ನೀರನ್ನು ಉಳಿಸಿದರೆ, ನಾಳೆ ದೊಡ್ಡ ಮಟ್ಟದ ಸಂರಕ್ಷಣೆ ಸಾಧ್ಯ.

**ಅನುಸರಿಸಬೇಕಾದ ಕ್ರಮಗಳು:**

ಸೋರಿಕೆಯಾಗುತ್ತಿರುವ ಕೊಳವೆಗಳು ಮತ್ತು ನೀರು ಸಂಗ್ರಹ ವ್ಯವಸ್ಥೆಗಳನ್ನು ತಕ್ಷಣ ದುರಸ್ತಿ ಮಾಡುವುದು. ಮುಖ ಮತ್ತು ಪಾತ್ರೆ ತೊಳೆಯುವಾಗ ನಲ್ಲಿಗಳನ್ನು (ಟ್ಯಾಪ್) ಅನಗತ್ಯವಾಗಿ ತೆರೆದಿಡದಿರುವುದು. ಸ್ನಾನಕ್ಕೆ ಶವರ್ ಬದಲಾಗಿ ಬಕೆಟ್ ಬಳಸುವುದು ಮತ್ತು ನೀರು ಉಳಿತಾಯ ಮಾಡುವ ಆಧುನಿಕ ಉಪಕರಣಗಳನ್ನು ಅಳವಡಿಸುವುದು.

ಮನೆ, ಶಾಲೆ, ಹಾಗೂ ಸಾರ್ವಜನಿಕ ಕಟ್ಟಡಗಳಲ್ಲಿ ಮಳೆನೀರು ಸಂಗ್ರಹಣೆಯನ್ನು ಕಡ್ಡಾಯಗೊಳಿಸುವುದು. ಕುಡಿಯುವ ನೀರನ್ನು ತೋಟಗಾರಿಕೆ ಅಥವಾ ವಾಹನ ತೊಳೆಯಲು ಬಳಸದೆ, ತ್ಯಾಜ್ಯ ಸಂಸ್ಕರಿಸಿದ ನೀರನ್ನು ಮರುಬಳಕೆ ಮಾಡುವುದು. ಕೃಷಿಯಲ್ಲಿ ಹನಿ ಮತ್ತು ತುಂತುರು ನೀರಾವರಿ ಪದ್ಧತಿ ಅಳವಡಿಸುವುದು.

**ಜಲ-ವಿದ್ಯುತ್ ನಡುವಿನ ನಂಟು ಮತ್ತು ಜಾಗೃತಿ ಚಟುವಟಿಕೆಗಳು:** ನಮ್ಮ ರಾಜ್ಯದ ಒಟ್ಟು ವಿದ್ಯುತ್ ಉತ್ಪಾದನೆಯಲ್ಲಿ ಶೇಕಡಾ 15 ರಿಂದ 20 ರಷ್ಟು ಪಾಲು ಜಲವಿದ್ಯುತ್ ಯೋಜನೆಯಿಂದ ಬರುತ್ತದೆ. ಅಂದರೆ, ನೀರಿನ ಕೊರತೆಯಾದರೆ ದೇಶದಲ್ಲಿ ವಿದ್ಯುತ್ ಕೊರತೆಯೂ ತಾನಾಗಿಯೇ ಉಂಟಾಗುತ್ತದೆ. ಈ ಗಂಭೀರ ಪರಿಸ್ಥಿತಿಯನ್ನು ಮನಗಂಡು ಸಾರ್ವಜನಿಕರು ಜಲ ಮತ್ತು ವಿದ್ಯುತ್ ಮಿತವ್ಯಯವನ್ನು ಸ್ವಯಂಪ್ರೇರಿತರಾಗಿ ರೂಢಿಸಿಕೊಳ್ಳಬೇಕು.

ಈ ನಿಟ್ಟಿನಲ್ಲಿ ಶಾಲೆ, ಕಾಲೇಜು ಮತ್ತು ಕಚೇರಿಗಳಲ್ಲಿ ಜಲ ಹಾಗೂ ವಿದ್ಯುತ್ ಸಂರಕ್ಷಣಾ ಪ್ರತಿಜ್ಞಾ ವಿಧಿ ಕಾರ್ಯಕ್ರಮ, ಜಾಗೃತಿ ಮೆರವಣಿಗೆಗಳು, ಬೀದಿ ನಾಟಕಗಳು ಮತ್ತು ಪೋಸ್ಟರ್ ಪ್ರದರ್ಶನಗಳನ್ನು ಆಯೋಜಿಸಬೇಕಾಗಿದೆ. ಸಮುದಾಯದ ಸಹಭಾಗಿತ್ವದೊಂದಿಗೆ 'ಜಲ ಸಂರಕ್ಷಣಾ ವಾರ' ಮತ್ತು 'ವಿದ್ಯುತ್ ಸಂರಕ್ಷಣಾ ದಿನ'ವನ್ನು ಆಚರಿಸಿ, ಭವಿಷ್ಯದ ಪೀಳಿಗೆಗೆ ಸುಸ್ಥಿರ ಹಾಗೂ ಸಮೃದ್ಧ ಜೀವನಮಟ್ಟವನ್ನು ಖಚಿತಪಡಿಸೋಣ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯುತ್ ಸಂರಕ್ಷಣೆ : ಇಂದಿನ ಉಳಿತಾಯವೇ ನಾಳೆಯ ಭವಿಷ್ಯ

ಆಧುನಿಕ ಜಗತ್ತಿನಲ್ಲಿ ವಿದ್ಯುತ್ ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿದೆ. ಆದರೆ, ವಿದ್ಯುತ್ ಅನ್ನು ಇಂದಿಗೂ ಹೆಚ್ಚಾಗಿ ಕಲ್ಲಿದ್ದಲು ಸುಡುವ ಮೂಲಕ ಉತ್ಪಾದಿಸಲಾಗುತ್ತಿರುವುದರಿಂದ ವಾಯು ಮಾಲಿನ್ಯ ಹೆಚ್ಚುತ್ತಿದ್ದು, ಭೂಮಿಯ ತಾಪಮಾನ ಏರಿಕೆಗೆ ಕಾರಣವಾಗುತ್ತಿದೆ. ಶಕ್ತಿ ಭದ್ರತೆ ಹಾಗೂ ಪರಿಸರ ಮಾಲಿನ್ಯ ತಗ್ಗಿಸಲು ಜವಾಬ್ದಾರಿಯುತ ವಿದ್ಯುತ್ ಬಳಕೆ ಅತ್ಯಗತ್ಯವಾಗಿದೆ.

### ವಿದ್ಯುತ್ ಉಳಿತಾಯದ ಸೂತ್ರಗಳು

ಬಳಕೆಯಿಲ್ಲದಾಗ ದೀಪಗಳು, ಫ್ಯಾನ್‌ಗಳನ್ನು ಕಡ್ಡಾಯವಾಗಿ ಆರಿಸುವುದು ಹಾಗೂ ಸಾಮಾನ್ಯ ಬಲ್ಬುಗಳ ಬದಲಿಗೆ ಎಲ್‌ಇಡಿ ದೀಪಗಳನ್ನು ಬಳಸುವುದು. ಮೇಲ್ಛಾವಣಿ ಸೌರ ವ್ಯವಸ್ಥೆ ಹಾಗೂ ಸೋಲಾರ್ ಉಪಕರಣಗಳ ಬಳಕೆಗೆ ಆದ್ಯತೆ ನೀಡುವುದು. ಹಗಲಿನಲ್ಲಿ ನೈಸರ್ಗಿಕ ಬೆಳಕು ಮತ್ತು ಗಾಳಿಯನ್ನು ಗರಿಷ್ಠ ಪ್ರಮಾಣದಲ್ಲಿ ಬಳಸುವುದು. ಮೊಬೈಲ್ ಹಾಗೂ ಇತರ ಸಾಧನಗಳ ಚಾರ್ಜರ್‌ಗಳನ್ನು ಬಳಕೆಯ ನಂತರ ಪ್ಲಗ್‌ನಿಂದ ಬೇರ್ಪಡಿಸುವುದು. ಏರ್ ಕಂಡೀಷನರ್‌ಗಳನ್ನು 24–26 ಡಿಗ್ರಿ ಸೆಂ. ತಾಪಮಾನದಲ್ಲಿ ನಿರ್ವಹಿಸುವುದು. ಶಾಲೆ, ಕಾಲೇಜು ಹಾಗೂ ಕಚೇರಿಗಳಲ್ಲಿ ನಿಯಮಿತವಾಗಿ ವಿದ್ಯುತ್ ಲೆಕ್ಕಪರಿಶೋಧನೆ ನಡೆಸುವುದು.

## ಲಂಚ ಸ್ವೀಕರಿಸುತ್ತಿದ್ದ ಇಬ್ಬರು ಕೆಯುಡಬ್ಲ್ಯೂಎಸ್‌ಡಿಬಿ ಅಧಿಕಾರಿಗಳು ಲೋಕಾಯುಕ್ತ ಬಲೆಗೆ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ನಗರದ ಹೊಸಪೇಟೆ ರಸ್ತೆಯಲ್ಲಿರುವ 2ನೇ ರೈಲ್ವೇ ಗೇಟ್ ಹತ್ತಿರದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಉಪವಿಭಾಗದ ಕಚೇರಿಯಲ್ಲಿ ಶುಕ್ರವಾರ ಮಧ್ಯಾಹ್ನ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದು, ಲಂಚ ಪಡೆಯುತ್ತಿದ್ದ ಇಬ್ಬರು ಅಧಿಕಾರಿಗಳನ್ನು ಬಂಧಿಸಿದ್ದಾರೆ.




**ಪ್ರಕರಣದ ಹಿನ್ನೆಲೆ:** ದೂರುದಾರರಾದ ವೀರೇಶ್ (ತಂದೆ ಹುಸೇನಪ್ಪ, 27 ವರ್ಷ), ರಾಮರಾಜು ರವರ ರಿಯಲ್ ಎಸ್ಟೇಟ್ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದರು. ಸಂಗನಕಲ್ಲು ರಸ್ತೆಯ ವಡ್ಡೆ ಗೋವಿಂದಪ್ಪ ಅವರಿಗೆ ಸೇರಿದ ಸರ್ವೆ ನಂ: 78/3 ರ 2.47 ಎಕರೆ ಜಮೀನಿನ ಬಹು ನಿವೇಶನ ವಿನ್ಯಾಸಕ್ಕೆ ಸಂಬಂಧಿಸಿದಂತೆ, ನೀರು ಸರಬರಾಜು ಹಾಗೂ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಅಂದಾಜು ಪಟ್ಟಿಯನ್ನು ತಯಾರಿಸಿ ಮೇಲಾಧಿಕಾರಿಗಳಿಗೆ ಸಲ್ಲಿಸುವ ಸರ್ಕಾರಿ ಕೆಲಸಕ್ಕಾಗಿ ಎ.ಇ ಅಶೋಕ್ ಎಸ್. ಅವರು 55,000 ರೂ.ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಈ ಕುರಿತು ವೀರೇಶ್ ಅವರು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು (ಅಪರಾಧ ಸಂಖ್ಯೆ: 07/2026 ಕಲಂ 7(ಎ) ಪಿಸಿ ಆಕ್ಟ್ 1988).

**ಲೋಕಾಯುಕ್ತ ದಾಳಿ ಮತ್ತು ದಸ್ತಗಿರಿ:** ದೂರಿನ ಅನ್ವಯ ಜು.03 ರಂದು ಮಧ್ಯಾಹ್ನ ಸುಮಾರು 12.30ರ ವೇಳೆಗೆ ಲೋಕಾಯುಕ್ತ ಪೊಲೀಸರು ಕಚೇರಿಯ ಮೇಲೆ ದಾಳಿ ನಡೆಸಿದ್ದಾರೆ. ದೂರುದಾರರಿಂದ ಪಡೆದ 55,000 ರೂ. ಲಂಚದ ಹಣದಲ್ಲಿ 27,500 ರೂ. ಗಳನ್ನು ಅಶೋಕ್ ಎಸ್. ಅವರು ತಮ್ಮ ಮೇಲಾಧಿಕಾರಿಯಾದ ಎ.ಇ.ಇ. ಕಾಶಿ ವಿಶ್ವನಾಥ್ ಅವರಿಗೆ ನೀಡುತ್ತಿದ್ದರು.

ಈ ಸಂದರ್ಭದಲ್ಲಿ ದಾಳಿ ನಡೆಸಿದ ಪೊಲೀಸರು ಇಬ್ಬರನ್ನೂ ಕಚೇರಿಯಲ್ಲೇ ರೆಡ್‌ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ. ಇಬ್ಬರ ಬಳಿಯಿಂದಲೂ ತಲಾ 27,500 ರೂ. ಗಳ ಲಂಚದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ತಿಳಿಸಲಾಗಿದೆ.

**ಕಾರ್ಯಾಚರಣೆ ತಂಡ:** ಬಳ್ಳಾರಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎನ್. ವಾಸುದೇವರಾಮ ಅವರ ಮಾರ್ಗದರ್ಶನದಲ್ಲಿ, ಪೊಲೀಸ್ ನಿರೀಕ್ಷಕರುಗಳಾದ ಗುರಣ್ಣ ಎಸ್ ಹೆಬ್ಬಾಳ್ ಮತ್ತು ಸುರೇಶ್ ಎಂ ಭಾವಿಮನಿ ಅವರ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ.

ಕಾರ್ಯಾಚರಣೆಯಲ್ಲಿ ಲೋಕಾಯುಕ್ತ ಸಿಬ್ಬಂದಿಗಳಾದ ಚಂದ್ರಶೇಖರ್, ವಸಂತಕುಮಾರ್, ಅರವಿಂದ, ಅಂಜಿನಪ್ಪ, ಹನುಮಂತಪ್ಪ, ಪ್ರಕಾಶ್ ಎಂ., ನಜೀಮ್ ಶೇಖ್, ಗೊಲ್ಲರ ದಾಸಪ್ಪ, ಹೊನ್ನೂರಪ್ಪ ಕೆ.ಟಿ ಮತ್ತು ಹರೀಶ್.ವಿ ಅವರು ಭಾಗವಹಿಸಿದ್ದರು ಎಂದು ಪ್ರಕಟಣೆ ತಿಳಿಸಿದೆ.

## ಬಳ್ಳಾರಿ ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನ ಯಶಸ್ವಿ : ಶೇ. 101.2 ರಷ್ಟು ಪ್ರಗತಿ ಸಾಧನೆ : ಡಿಹೆಚ್‌ಒ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದಡಿ ಬಳ್ಳಾರಿ ಜಿಲ್ಲೆಯು ಅತ್ಯುತ್ತಮ ಸಾಧನೆ ಮಾಡಿದ್ದು, ನಿಗದಿತ ಗುರಿಗಿಂತಲೂ ಹೆಚ್ಚು ಅಂದರೆ ಶೇಕಡಾ 101.2 ರಷ್ಟು ಪ್ರಗತಿ ಸಾಧಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ.

ಜೂನ್ 28 ರಿಂದ ಜುಲೈ 1 ರವರೆಗೆ ಒಟ್ಟು ನಾಲ್ಕು ದಿನಗಳ ಕಾಲ ನಡೆದ ಈ ಅಭಿಯಾನದಲ್ಲಿ ಜಿಲ್ಲೆಯ 5 ವರ್ಷದೊಳಗಿನ ಒಟ್ಟು 1,99,934 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿತ್ತು. ಆದರೆ, ಜಿಲ್ಲಾಡಳಿತದ ಸಕ್ರಿಯ ಪ್ರೋತ್ಸಾಹ ಹಾಗೂ ಆರೋಗ್ಯ ಇಲಾಖೆಯ ನಿರಂತರ ಶ್ರಮದಿಂದಾಗಿ ಒಟ್ಟು 2,02,387 ಮಕ್ಕಳಿಗೆ ಯಶಸ್ವಿಯಾಗಿ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಮೂಲಕ ಈ ಮಹತ್ತರ ಸಾಧನೆ ಮಾಡಲಾಗಿದೆ. ಬಳ್ಳಾರಿ, ಸಂಡೂರು, ಸಿರುಗುಪ್ಪ, ಕುರುಗೋಡು ಮತ್ತು ಕಂಪ್ಲಿ ತಾಲೂಕುಗಳಲ್ಲಿ ಈ ಅಭಿಯಾನ ಅತ್ಯಂತ ಯಶಸ್ವಿಯಾಗಿ ನಡೆದಿದೆ.

**ತಾಲೂಕುವಾರು ಪ್ರಗತಿ ವಿವರ:**

ಬಳ್ಳಾರಿ ತಾಲೂಕು: 95,879 ಗುರಿ, 96,741 ಮಕ್ಕಳಿಗೆ ಲಸಿಕೆ (ಶೇ. 100.9 ಪ್ರಗತಿ).



ಕಂಪ್ಲಿ ತಾಲೂಕು: 14,627 ಗುರಿ, 15,368 ಮಕ್ಕಳಿಗೆ ಲಸಿಕೆ (ಶೇ. 105.1 ಪ್ರಗತಿ).

ಕುರುಗೋಡು ತಾಲೂಕು: 17,241 ಗುರಿ, 17,483 ಮಕ್ಕಳಿಗೆ ಲಸಿಕೆ (ಶೇ. 101.4 ಪ್ರಗತಿ).

ಸಂಡೂರು ತಾಲೂಕು: 35,818 ಗುರಿ, 36,363 ಮಕ್ಕಳಿಗೆ ಲಸಿಕೆ (ಶೇ. 101.5 ಪ್ರಗತಿ).

ಸಿರುಗುಪ್ಪ ತಾಲೂಕು: 36,369 ಗುರಿ, 36,432 ಮಕ್ಕಳಿಗೆ ಲಸಿಕೆ (ಶೇ. 100.2 ಪ್ರಗತಿ). ಎಲ್ಲಾ ಮಕ್ಕಳಿಗೂ ಲಸಿಕೆ ತಲುಪಿಸುವ ದಿಸೆಯಲ್ಲಿ ಜಿಲ್ಲಾದ್ಯಂತ 335 ಕ್ಲಿಷ್ಟಕರ ಪ್ರದೇಶಗಳನ್ನು ಗುರುತಿಸಲಾಗಿತ್ತು. ಇಂತಹ ಸ್ಥಳಗಳಲ್ಲಿ ಲಸಿಕೆ ನೀಡಲು 236 ವಿಶೇಷ ತಂಡಗಳನ್ನು ಸಿದ್ಧಗೊಳಿಸಲಾಗಿತ್ತು. ಒಟ್ಟಾರೆಯಾಗಿ 977 ಪೋಲಿಯೋ ಬೂತ್‌ಗಳು ಹಾಗೂ 615 ಮನೆ ಭೇಟಿ ತಂಡಗಳು ಕಾರ್ಯನಿರ್ವಹಿಸಿದವು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ಹನುಮಂತಪ್ಪ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಹೆಚ್ಚು ಸೇರುವ ಸಂತೆ, ಮಾರುಕಟ್ಟೆ, ಬಸ್ ನಿಲ್ದಾಣ ಮುಂತಾದ ಸ್ಥಳಗಳಲ್ಲಿ ಲಸಿಕೆ ಹಾಕಲು 50 ತಂಡಗಳನ್ನು ನಿಯೋಜಿಸಲಾಗಿತ್ತು.

ಇದರೊಂದಿಗೆ ವಲಸೆ ಪ್ರದೇಶಗಳಾದ ಇಟ್ಟಿಗೆ ಭಟ್ಟಿ, ಕಟ್ಟಡ ಕಾಮಗಾರಿ ಪ್ರದೇಶ, ಕಬ್ಬು ಕಡಿಯುವ ಸ್ಥಳಗಳು ಮತ್ತು ಕುರಿಹಟ್ಟಿ ಮುಂತಾದ ಕಡೆಗಳಲ್ಲಿ ಲಸಿಕೆ ತಲುಪಿಸಲು 15 ಸಂಚಾರಿ (ಮೊಬೈಲ್) ತಂಡಗಳ ಮೂಲಕ ಯಶಸ್ವಿ ಸಾಧನೆ ಮಾಡಲಾಗಿದೆ. ಈ ಬೃಹತ್ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಹಾಗೂ ಸ್ವಯಂಸೇವಕರು ವ್ಯಾಕ್ಸಿನೇಟರ್‌ಗಳಾಗಿ ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದಾರೆ. ಇವರ ಮೇಲ್ವಿಚಾರಣೆಗಾಗಿ 188 ಮೇಲ್ವಿಚಾರಕರು ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ನೋಡಲ್ ಅಧಿಕಾರಿಗಳಾಗಿ ಶ್ರಮಿಸಿದ್ದಾರೆ. **ಪುಟ–2**

## ಜು.5ರೊಳಗೆ ಎಸ್.ಐ.ಆರ್ ನೋಂದಣಿ ಪ್ರಕ್ರಿಯೆ ಎನ್ಯಾಮುರೇಷನ್ ಫಾರ್ಮ್ ವಿತರಣೆ ಶೇ.100% ರಷ್ಟು ಪೂರ್ಣಗೊಳಿಸಿ

▪ **ಗಣಿನಾಡವಾಣಿ ವಾರ್ತೆ, ವಿಜಯನಗರ**

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಗಣತಿ ನಮೂನೆ (ಎನ್ಯಾಮುರೇಷನ್ ಫಾರ್ಮ್) ವಿತರಣೆ ಕಾರ್ಯ ಜುಲೈ 5 ರೊಳಗೆ ಶೇಕಡಾ 100 ರಷ್ಟು ಪೂರ್ಣಗೊಳಿಸಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾದ ಡಾ|| ಕೆ.ಜಿ. ಜಗದೀಶ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ಮತದಾರರ ಪಟ್ಟಿ ಪರಿಷ್ಕರಣೆ ವೇಳೆ ಸಾರ್ವಜನಿಕರು, ಉದ್ಯಮಿದಾರರು ಸಿಗದಿದ್ದಲ್ಲಿ ಬಿ.ಎಲ್.ಓಗಳು ಯಾವುದೇ ರೀತಿಯ ಉದಾಸೀನತೆ ತೋರಬಾರದು. ಇಂತಹ ಬೇಜವಾಬ್ದಾರಿತನದಿಂದಾಗಿ ಮತದಾರರ ಪಟ್ಟಿಯಲ್ಲಿ ಹೆಸರುಗಳು ಬಿಟ್ಟು ಹೋಗುವುದರ ಜೊತೆಗೆ ಮುಂಬರುವ ದಿನಗಳಲ್ಲಿ ಹಲವು ತಾಂತ್ರಿಕ ಹಾಗೂ ಕಾನೂನಾತ್ಮಕ ತೊಡಕುಗಳು ಎದುರಿಸಬೇಕಾಗುತ್ತದೆ. ಆದ್ದರಿಂದ ಹಿರಿಯ ಅಧಿಕಾರಿಗಳು ಈ ಕುರಿತು ಬಿ.ಎಲ್.ಓಗಳಿಗೆ ಪ್ರತಿದಿನ ಸೂಕ್ತ ಸಲಹೆ ಹಾಗೂ ಸೂಚನೆಗಳನ್ನು ನೀಡುತ್ತಾ ಕಾರ್ಯದ ಪ್ರಗತಿಯನ್ನು ಪರಿಶೀಲಿಸಬೇಕು. ಬಿ.ಎಲ್.ಓಗಳು ಪ್ರತಿಯೊಂದು ಮನೆ ಮನೆಗೆ ಭೇಟಿ ನೀಡಿದಾಗ ನಿಖರ ಹಾಗೂ ಸ್ಪಷ್ಟ ಮಾಹಿತಿಯನ್ನೇ ದಾಖಲಿಸಬೇಕು. ಪೂರ್ಣ ಆಸಕ್ತಿಯಿಂದ ಕೆಲಸ ಮಾಡಿದರೆ ಶೇ. 99ರಷ್ಟು ಗುರಿ ಸಾಧಿಸಬಹುದು. ನಗರ ಹಾಗೂ ಗ್ರಾಮೀಣ ಪ್ರದೇಶಗಳಿಂದ ತಾತ್ಕಾಲಿಕವಾಗಿ ಬೇರೆಡೆಗೆ ಸ್ಥಳಾಂತರಗೊಂಡಿರುವ ನಾಗರಿಕರ ಬಗ್ಗೆ ವಿಶೇಷ ಗಮನ ಹರಿಸಿ, ಮಾಹಿತಿ ಕಲೆಹಾಕಿ ಎಚ್ಚರಿಕೆಯಿಂದ ನೋಂದಣಿ ಮಾಡಿಕೊಳ್ಳಬೇಕು. ಇದಕ್ಕಾಗಿ ಬಿ.ಎಲ್.ಎಗಳ ಹಾಗೂ ಸ್ಥಳೀಯ ಆಡಳಿತ ಸಂಸ್ಥೆಗಳ ನೆರವು ಪಡೆದು ಎಸ್.ಐ.ಆರ್ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು ಎಂದರು.

ಪ್ರಸಕ್ತ ವರ್ಷ ಮುಂಗಾರು ಮಾನ್ಸೂನ್ ಮಳೆ ನಿರೀಕ್ಷಿತ ಮಟ್ಟದಲ್ಲಿ ಆಶಾದಾಯಕವಾಗಿಲ್ಲ. ಇದರಿಂದಾಗಿ ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ದಟ್ಟವಾಗಿದೆ. ಈ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಹಾಗೂ ಸ್ಥಳೀಯ ಆಡಳಿತದ ಪ್ರಮುಖ ಪಾತ್ರ ವಹಿಸಲಿದೆ. ಸದ್ಯದ ಹವಾಮಾನ ಪರಿಸ್ಥಿತಿಗೆ ತಕ್ಕಂತೆ ಪರ್ಯಾಯ ಹವಾಮಾನ ಆಧಾರಿತ ಬಿತ್ತನೆ ಬೀಜಗಳನ್ನು ದಾಸ್ತಾನು ಇಟ್ಟುಕೊಳ್ಳಬೇಕು. ಯಾವುದೇ ಲೋಪದೋಷಗಳಿಲ್ಲದೆ ಅತ್ಯಂತ ಪಾರದರ್ಶಕವಾಗಿ ಬೆಳೆ ಸಮೀಕ್ಷೆ ನಡೆಸಬೇಕು. ಮಳೆ ಕೊರತೆ ಅಥವಾ ನೆರೆಯಿಂದ ಬೆಳೆ ಹಾನಿಯುಂಟಾಗುವುದರಿಂದ ರೈತರ ಆರ್ಥಿಕ ನಷ್ಟ ತುಂಬಲು ಅವರ ಹಿತರಕ್ಷಣೆಗಾಗಿ ಬೆಳೆ ವಿಮೆ ನೋಂದಣಿ ಪ್ರಕ್ರಿಯೆಯಲ್ಲಿ ಶೇಕಡಾ 100 ರಷ್ಟು ಪ್ರಗತಿ ಸಾಧಿಸಲು ಅಧಿಕಾರಿಗಳು ಶ್ರಮಿಸಬೇಕು ಎಂದು ತಿಳಿಸಿದರು.

ಮುಂಗಾರು ಮಳೆ ಕೈಕೊಟ್ಟಿರುವುದರಿಂದ ಮುಂಬರುವ ದಿನಗಳಲ್ಲಿ ಜಿಲ್ಲಾದ್ಯಂತ ಕುಡಿಯುವ ನೀರಿನ ತೀವ್ರ ಅಭಾವ ಸೃಷ್ಟಿಯಾಗುವ ಆತಂಕವಿದೆ. ಇದಕ್ಕೆ ತಕ್ಕಂತೆ ಸ್ಥಳೀಯ ಆಡಳಿತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅನಿವಾರ್ಯ. ನೀರಿನ ಸಮಸ್ಯೆ ಎದುರಿಸಬಹುದಾದ ಗ್ರಾಮಗಳನ್ನು ಮುಂಚಿತವಾಗಿಯೇ ಗುರುತಿಸಿ, ಅಲ್ಲಿನ ಖಾಸಗಿ ಕೊಳವೆಬಾವಿಗಳನ್ನು ಕಾಯ್ದಿರಿಸಿಕೊಳ್ಳಬೇಕು. ತೀವ್ರ ಸಮಸ್ಯೆಯಿರುವ ಪ್ರದೇಶಗಳಿಗೆ ತಕ್ಷಣವೇ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ವ್ಯವಸ್ಥೆ ಮಾಡಿಕೊಳ್ಳಬೇಕು. ಹೊಸ ಕೊಳವೆಬಾವಿಗಳನ್ನು ಕೊರೆಸುವ ನಿರ್ಧಾರವನ್ನು ಕೊನೆಯ ಆಯ್ಕೆಯಾಗಿ ಇಟ್ಟುಕೊಳ್ಳಬೇಕು. ಯಾವುದೇ ವಿಳಂಬಕ್ಕೆ ಆಸ್ಪದ ನೀಡದೆ, ಅತ್ಯಂತ ಜವಾಬ್ದಾರಿಯಿಂದ ಸಕ್ರಿಯವಾಗಿ ಪಾಲ್ಗೊಂಡು ಜುಲೈ 5 ರಳಗೆ ನಿಗದಿಪಡಿಸಿದ ಎಲ್ಲಾ ಕಾರ್ಯಗಳನ್ನು ಪೂರ್ಣಗೊಳಿಸಬೇಕು ಎಂದು ತಾಕೀತು ಮಾಡಿದರು. ಎಸ್‌ಐಆರ್ ನೋಂದಣಿ ಪ್ರಕ್ರಿಯೆಯನ್ನು ಯಾವುದೇ ಲೋಪವಾದಂತೆ ಎಚ್ಚರಿಕೆಯಿಂದ ನಿಭಾಯಿಸುವಂತೆ ಬಿಎಲ್‌ಒಗಳಿಗೆ ಪ್ರತಿದಿನ ಸೂಕ್ತ ನಿರ್ದೇಶನ ನೀಡುವುದರ ಜತೆಗೆ ಪ್ರಗತಿಯನ್ನು ಪರಿಶೀಲಿಸಲಾಗುವುದು. ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ನೋಂದಣಿ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗೆ ಶೇ.100 ರಷ್ಟು ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಬಿ.ಎಲ್.ಓಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ನೋಂಗ್ಜಾಯ್ ಮಹಮದ್ ಅಲಿ ಅಕ್ರಂ ಷಾ, ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮನೋಹರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಎಂ.ವೈ.ಕಾಳೆ, ತಹಶೀಲ್ದಾರ್ ಶೃತಿ ಎಂ ಮಾಳಪ್ಪ ಗೌಡರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಬಳ್ಳಾರಿ : ಗ್ರಾಮ ಒನ್ ಕೇಂದ್ರದಲ್ಲಿ ಖಾಲಿ ಇರುವ ಫ್ರಾಂಚೈಸಿ ಹುದ್ದೆಗೆ ಆನ್‌ಲೈನ್ ಅರ್ಜಿ ಆಹ್ವಾನ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಜಿಲ್ಲಾದ್ಯಂತ ನಾಗರಿಕರಿಗೆ ಉತ್ತಮ ಸೇವೆಗಳನ್ನು ನೀಡುತ್ತಿರುವ 'ಗ್ರಾಮ ಒನ್' ಕೇಂದ್ರಗಳ ಪೈಕಿ, ಪ್ರಸ್ತುತ ಖಾಲಿ ಇರುವ ಗ್ರಾಮ ಒನ್ ಕೇಂದ್ರಕ್ಕೆ ಫ್ರಾಂಚೈಸಿಗಳನ್ನು ನೇಮಕ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯ ತಿಳಿಸಿದೆ.

ಸರ್ಕಾರದ ಇ-ಆಡಳಿತ ಇಲಾಖೆಯ ಇಡಿಸಿಎಸ್ ನಿರ್ದೇಶನಾಲಯದ ಸೂಚನೆಯಂತೆ ಈ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಜಿಲ್ಲೆಗೆ ಒಟ್ಟು 177 ಗ್ರಾಮ ಒನ್ ಕೇಂದ್ರಗಳು ಮಂಜೂರಾಗಿದ್ದು, ಈ ಪೈಕಿ ಈಗಾಗಲೇ 167 ಕೇಂದ್ರಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ.

ಉಳಿದ ಕೇಂದ್ರಗಳ ಪೈಕಿ 09 ಕೇಂದ್ರಗಳಿಗೆ ಆನ್‌ಲೈನ್ ಮೂಲಕ ಸ್ವೀಕರಿಸಲಾದ ಅರ್ಜಿಗಳು ಸದ್ಯ ಪರಿಶೀಲನಾ ಹಂತದಲ್ಲಿದ್ದು, ಬಾಕಿ ಇರುವ 01 ಕೇಂದ್ರಕ್ಕೆ ಹೊಸದಾಗಿ ಅರ್ಜಿ ಆಹ್ವಾನಿಸಲಾಗಿದೆ.

**ಖಾಲಿ ಇರುವ ಕೇಂದ್ರದ ವಿವರ:**

ಸಂಡೂರು ತಾಲ್ಲೂಕಿನ ನರಸಿಂಗಪುರ ಗ್ರಾಮ ಪಂಚಾಯಿತಿ.

ಖಾಲಿ ಇರುವ ಗ್ರಾಮ ಒನ್ ಕೇಂದ್ರದ ಸಂಪೂರ್ಣ ವಿವರಗಳನ್ನು https://sevasindhuservices.karnataka.gov.in/directApply.do?serviceId=2631 ವೆಬ್‌ಸೈಟ್‌ನಲ್ಲಿ ನೀಡಲಾಗಿದ್ದು, ಆಸಕ್ತರು ಅಧಿಕೃತ ಲಿಂಕ್ ಬಳಸಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಡೂರು ತಹಶೀಲ್ದಾರರ ಕಚೇರಿ ಅಥವಾ ಜಿಲ್ಲಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಸರ್ಕಾರಿ, ಖಾಸಗಿ, ಅನುದಾನಿತ ಶಾಲಾ, ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶಿಷ್ಯವೇತನಕ್ಕೆ ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟಿನ https://ssp.postmatric.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ.

ಬಳ್ಳಾರಿ ತಾಲ್ಲೂಕಿನ ಸರ್ಕಾರಿ, ಖಾಸಗಿ, ಅನುದಾನಿತ ಶಾಲಾ, ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಏನಾದರೂ ತಾಂತ್ರಿಕ ತೊಂದರೆಗಳಾದಲ್ಲಿ ಎಸ್‌ಎಸ್‌ಪಿ ಸಹಾಯವಾಣಿ ಸಂಖ್ಯೆ 080-22261789 ಗೆ ಕರೆ ಮಾಡಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ವಾಲ್ಮೀಕಿ ಭವನದ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ : ಪತ್ತೆಗೆ ಮನವಿ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**



ತಾಲ್ಲೂಕಿನ ಸಂಗನಕಲ್ಲು ಗ್ರಾಮದ ಸಂಗಮೇಶ್ವರ ಶಾಲೆ ಹತ್ತಿರದ ನಿವಾಸಿಯಾದ ಗುರುರಾಜ್ ರಾವ್.ಬಿ ಎನ್ನುವ 60 ವರ್ಷದ ವ್ಯಕ್ತಿ ಜೂನ್ 22 ರಂದು ಹಪ್ಪಳ ಮಾರಿಕೊಂಡು ಬರುವುದಾಗಿ ಹೇಳಿ ಪುನ: ಮನೆಗೆ ಬಾರದೇ ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

**ಕಾಣೆಯಾದ ವ್ಯಕ್ತಿಯ ಚಹರೆ:** ಎತ್ತರ 6.2 ಅಡಿ, ಕೋಲು ಮುಖ, ಗೋಧಿ ಮೈಬಣ್ಣ, ದೃಢವಾದ ಮೈಕಟ್ಟು, ಕಪ್ಪು ಮತ್ತು ಬಿಳಿ ಕೂದಲು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಗೀರುಗಳುಳ್ಳ ಬಣ್ಣದ ತುಂಬು ತೋಳಿನ ಬಿಳಿ ಬಣ್ಣದ ಅಂಗಿ ಮತ್ತು ಪಾಚಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕಿವುಡ ಮತ್ತು ಮೂಗನಾಗಿರುತ್ತಾನೆ. ವ್ಯಕ್ತಿಯ ಬಗ್ಗೆ ಯಾವುದೇ ಮಾಹಿತಿ ಲಭ್ಯ ಆದಲ್ಲಿ ದೂ.08392-276461, ಮೊ.9480803049 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಸರ್ಕಾರಿ ಆದರ್ಶ ವಿದ್ಯಾಲಯ : ಪ್ರವೇಶ ಪರೀಕ್ಷೆ ಫಲಿತಾಂಶ ಪ್ರಕಟ : ಜುಲೈ 6, 7 ಕ್ಕೆ ದಾಖಲಾತಿ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ನಗರದ ಈದ್ಗಾ ರಸ್ತೆಯ ಹಿರಿಯಾಳ್ ಕುಡಂನಲ್ಲಿರುವ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ಸಾಲಿನ 7, 8 ಮತ್ತು 9ನೇ ತರಗತಿಗಳ ಖಾಲಿ ಸೀಟುಗಳ ಭರ್ತಿಗಾಗಿ ನಡೆಸಲಾಗಿದ್ದ ಪ್ರವೇಶ ಪರೀಕ್ಷೆಯ ಫಲಿತಾಂಶ ಹಾಗೂ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಕಳೆದ ಜೂನ್ 23 ರಂದು ನಡೆದ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಶಾಲಾ ಪ್ರವೇಶಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಾರ್ವಜನಿಕರ ಹಾಗೂ ಪೋಷಕರ ಮಾಹಿತಿಗಾಗಿ ವಿದ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಶಾಲೆಯ ಮುಖ್ಯಗುರುಗಳು ತಿಳಿಸಿದ್ದಾರೆ.

ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳ ಅಧಿಕೃತ ದಾಖಲಾತಿ ಪ್ರಕ್ರಿಯೆಯು ಜು.06 ಮತ್ತು 07 ರಂದು ನಡೆಯಲಿದೆ. ಆಯ್ಕೆಯಾಗಿರುವ ವಿದ್ಯಾರ್ಥಿಗಳ ಪೋಷಕರು ತಕ್ಷಣವೇ ಶಾಲೆಗೆ ಭೇಟಿ ನೀಡಿ ಪ್ರವೇಶದ ಕುರಿತು ಸವಿಸ್ತಾರ ಮಾಹಿತಿ ಪಡೆಯಬೇಕು.

ಮಗು ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಶಾಲೆಯಿಂದ ಮೂಲ ವರ್ಗಾವಣೆ ಪತ್ರ ಹಾಗೂ ಅಗತ್ಯ ದಾಖಲೆಗಳನ್ನು ಪಡೆದುಕೊಂಡು, ನಿಗದಿಪಡಿಸಿದ ದಿನಾಂಕದೊಳಗೆ ಪ್ರವೇಶಾತಿ ಹೊಂದಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನ ಯಶಸ್ವಿ : ಶೇ. 101.2 ರಷ್ಟು ಪ್ರಗತಿ ಸಾಧನೆ : ಡಿಹೆಚ್‌ಒ

■ **ಮೊದಲ ಪುಟದಿಂದ**

**ಜಿಲ್ಲಾಡಳಿತದಿಂದ ಕೃತಜ್ಞತೆ:**

ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾರ್ಗದರ್ಶನ ಮತ್ತು ಜಿಲ್ಲಾಡಳಿತದ ಸಂಪೂರ್ಣ ಬೆಂಬಲದೊಂದಿಗೆ, ವಿವಿಧ ಇಲಾಖೆಗಳ ಸಹಕಾರದೊಂದಿಗೆ ಈ ಮೈಲಿಗಲ್ಲನ್ನು ಸಾಧಿಸಲಾಗಿದೆ.

ಈ ಅಭಿಯಾನದ ಯಶಸ್ಸಿಗಾಗಿ ಹಗಲಿರುಳು ಶ್ರಮಿಸಿದ ಪ್ರತಿಯೊಬ್ಬರಿಗೂ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆಯ ಪರವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಅಭಿನಂದನೆ ತಿಳಿಸಿದ್ದಾರೆ.

# ಸಹಕಾರಿ ಸಂಘಗಳು ಪ್ರತಿಯೊಬ್ಬರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಶ್ರಮಿಸುವುದು

■ **ಗಣಿನಾಡವಾಣಿ ವಾರ್ತೆ, ಸಿರುಗುಪ್ಪ**



ಎಲ್ಲರಿಗಾಗಿ ಒಬ್ಬರು, ಒಬ್ಬರಿಗಾಗಿ ಎಲ್ಲರೂ" ಎಂಬ ತತ್ವದಡಿ ಪ್ರತಿಯೊಬ್ಬರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಶ್ರಮಿಸುವುದು ಸಹಕಾರದ ತತ್ವವಾಗಿದೆ ಎಂದು

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ರಾಜ್ಯ ನಿರ್ದೇಶಕ ಹೆಚ್.ಜೆ. ಹನುಮಂತಯ್ಯ ಹೇಳಿದರು.

ನಗರದ ಪಿ.ಎಂ.ಶ್ರೀ. ಸರಕಾರಿ ಮಾದರಿ ಹಿರಿಯ ಪ್ರಾಥಮಿಕ(5ನೇ ವಿಭಾಗ) ಶಾಲೆಯಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.,ಬೆಂಗಳೂರು ಮತ್ತು ಬಳ್ಳಾರಿ ಜಿಲ್ಲಾ ಸೌಹಾರ್ದ ಸಹಕಾರಿ ಸಂಘಗಳು, ವಿಷ್ಣು ವಿಲಾಸ ಸೌಹಾರ್ದ ಸಹಕಾರಿ ಪತ್ತಿನ ಸಂಘ ನಿ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಕೇಂದ್ರ ಸಹಕಾರ ಸಚಿವಾಲಯದ 5ನೇ ವರ್ಷದ ಅಂಗವಾಗಿ "ಸಹಕಾರ ಸಪ್ತಾಹ" ಪ್ರಯುಕ್ತ ಶುಕ್ರವಾರ ಗಿಡ ನೆಡುವ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕಿ ಮಾತನಾಡಿದರು.

ಸಿಡಿಪಿಒ ಪ್ರದೀಪ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಗುರಪ್ಪ, ಅಗ್ನಿಶಾಮಕ ಠಾಣಾಧಿಕಾರಿ ಮಜರ್ ಹಸನ್ ಕ್ಷೇತ್ರ ಸಮನ್ವಯ ಅಧಿಕಾರಿ ತಮ್ಮನಗೌಡ ಪಾಟೀಲ್ , ಶಾಲೆಯ ಮುಖ್ಯ ಗುರುಮುಕ್ಕಣ್ಣ , ಬನ್ನಿ ಮಹಾಂಕಾಳಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಚಿಂತಕುಂಟ್ಟೆ ಗಾದಿಲಿಂಗನ ಗೌಡ, ಗುರುಪಾದೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಜಿ.ಮುದ್ದನಗೌಡ, ಸಿರಿ ಮಹಾಲಕ್ಷ್ಮಿ ಸೌಹಾರ್ದ ನಿರ್ದೇಶಕ ರಾಘವೇಂದ್ರ ಆಚಾರ, ವಿಶ್ವಚೇತನ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ರಾಘವೇಂದ್ರ ಹಾಗೂ ವಿಷ್ಣು ವಿಲಾಸ ಸೌಹಾರ್ದ ಮುಖ್ಯ ಕಾರ್ಯ ನಿರ್ವಾಹಕ ಅನಿಲ್ ಕುಮಾರ್ ಹಾಗೂ ಸಿರುಗುಪ್ಪ ತಾಲ್ಲೂಕಿನ ಎಲ್ಲ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಳಿಯ ಸದಸ್ಯರು ಹಾಗೂ ಸಿಬ್ಬಂದಿಗಳು ಇದ್ದರು.

## ಅಕ್ರಮ ಪಡಿತರ ಹಾಗೂ ಇಬ್ಬರೂ ಆರೋಪಿಗಳ ವಶ



■ **ಗಣಿನಾಡವಾಣಿ ವಾರ್ತೆ, ಸಿರುಗುಪ್ಪ**

ಬಿಜಿ ದಿನ್ನಿ ಗ್ರಾಮದ ಕಡೆಯಿಂದ ನಾಡಂಗ ಗ್ರಾಮದ ಕಡೆಗೆ ಮಹೀಂದ್ರ ಕಂಪನಿಯ ಗೂಡ್ಸ್ ಆಟೋದಲ್ಲಿ ಸಾಗಿಸುತ್ತಿದ್ದ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಶುಕ್ರವಾರ ಆಹಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ವಶಪಡಿಸಿಕೊಂಡರು.

35 ರಿಂದ 40 ಕೆಜಿ ತೂಕದ 80 ಚೀಲಗಳಲ್ಲಿ 30.40ಕ್ವಿಂಟಾಲ್ ರೂ.97,280 ಮೌಲ್ಯದ ಅಕ್ರಮ ಪಡಿತರವನ್ನು ಹಾಗೂ ಈ ಕೃತ್ಯದಲ್ಲಿ ಭಾಗಿಯಾಗಿದ್ದ ಆರೋಪಿಗಳಾದ ಹೊಸ ಗುಬ್ಬಿಹಾಳು ಗ್ರಾಮದ ಕೇಶವ, ನಾಡಂಗ ಗ್ರಾಮದ ವೆಂಕಟೇಶ ಇಬ್ಬರನ್ನು ಪೋಲಿಸರು ವಶಕ್ಕೆ ಪಡೆಸಿಕೊಂಡು ತಪಾಸಣೆ ನಡೆಸಿದರು.

ಈ ಕುರಿತು ತಾಲ್ಲೂಕಿನ ಹಚ್ಚೋಳ್ಳಿ ಪೋಲಿಸ್ ಠಾಣೆ ಪ್ರಕರಣ ದಾಖಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

ಹಚ್ಚೋಳ್ಳಿ ಪೋಲಿಸ್ ಠಾಣೆಯ ಪಿಎಸ್‌ಐ ಕುರುಬರ ಕುಮಾರಸ್ವಾಮಿ, ಆಹಾರ ನಿರೀಕ್ಷಕ ಎಂ.ವಿಜಯ್ ಕುಮಾರ್, ಪೋಲಿಸ್ ಸಿಬ್ಬಂದಿ ಇದ್ದರು.

## ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಶ್ರೀನಿವಾಸ್ ಬನ್ನಿಗೋಳ ಅಧಿಕಾರ ಸ್ವೀಕಾರ



■ **ಗಣಿನಾಡವಾಣಿ ವಾರ್ತೆ, ಯಲಬುರ್ಗಾ**

ಯಲಬುರ್ಗಾ ಹಾಗೂ ಕುಕುನೂರು ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಶ್ರೀನಿವಾಸ್ ಬನ್ನಿಗೋಳ ಅವರು ಗುರುವಾರ ಅಧಿಕಾರ ಸ್ವೀಕರಿಸಿದರು.

ಅಧಿಕಾರ ಸ್ವೀಕಾರದ ಬಳಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಶಿಕ್ಷಕರು ಶ್ರೀನಿವಾಸ್ ಬನ್ನಿಗೋಳ ಅವರನ್ನು ಸನ್ಮಾನಿಸಿ ಆತ್ಮೀಯವಾಗಿ ಸ್ವಾಗತಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ್ ಬನ್ನಿಗೋಳ, ಶಿಕ್ಷಣ ಇಲಾಖೆಯ ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಶಿಕ್ಷಕರ ಸಲಹೆ-ಸೂಚನೆಗಳಿಗೆ ಸದಾ ಗೌರವ ನೀಡಲಾಗುವುದು ಎಂದು ಹೇಳಿದರು. ಯಾವುದೇ ನಿರ್ಧಾರವನ್ನು ಏಕಪಕ್ಷೀಯವಾಗಿ ತೆಗೆದುಕೊಳ್ಳದೆ ಎಲ್ಲರ ಅಭಿಪ್ರಾಯಗಳನ್ನು ಪರಿಗಣಿಸಿ ಇಲಾಖೆಯ ಹಿತದೃಷ್ಟಿಯಿಂದ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

"ನಾನು ಹೆಚ್ಚು ಮಾತನಾಡುವುದಕ್ಕಿಂತ ಕೆಲಸ ಮಾಡುವುದಕ್ಕೆ ಆದ್ಯತೆ ನೀಡುತ್ತೇನೆ. ಇಲಾಖೆಯ ಸಿಬ್ಬಂದಿ ಹಾಗೂ ಶಿಕ್ಷಕರೂ ಇದೇ ಮನೋಭಾವದಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದರೆ ಇಲಾಖೆಗೆ ಉತ್ತಮ ಹೆಸರು ತರುವಲ್ಲಿ ಯಶಸ್ವಿಯಾಗಬಹುದು. ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ ಶಿಕ್ಷಣದ ಗುಣಮಟ್ಟವನ್ನು ಇನ್ನಷ್ಟು ಹೆಚ್ಚಿಸೋಣ" ಎಂದು ಅವರು ಕರೆ ನೀಡಿದರು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕಿ ಟಿ.ಜಿ. ದಾನಿ ಮಾತನಾಡಿ, ಶ್ರೀನಿವಾಸ್ ಬನ್ನಿಗೋಳ ಅವರು ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿಯಾಗಿ ಹೆಸರುವಾಸಿಯಾಗಿದ್ದು, ಅಖಂಡ ಯಲಬುರ್ಗಾ ತಾಲೂಕಿಗೆ ಅವರ ಆಗಮನ ಶಿಕ್ಷಣ ಇಲಾಖೆಗೆ ಹೊಸ ಚೈತನ್ಯ ನೀಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲೆ ಶಿಕ್ಷಕರ ಸಂಘದ ಜಿಲ್ಲಾ ಖಜಾಂಚಿ ಬಸವರಾಜ ಮೇಟಿ, ಕುಕುನೂರು ತಾಲೂಕು ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸುರೇಶ್ ಅಬ್ಬಿಗೇರಿ, ತಾಲೂಕು ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಶಿವಾನಂದ ಹೊಸಮನಿ, ಕಾರ್ಯದರ್ಶಿ ರಂಗಪ್ಪ ಓಲೇಕಾರ್, ಯಲಬುರ್ಗಾ ತಾಲೂಕಿನ ಪ್ರೌಢಶಾಲೆ ಶಿಕ್ಷಕರ ಪತ್ತಿನ ಸಂಘದ ಅಧ್ಯಕ್ಷ ಉದಯ್ ತಳವಾರ್, ಎನ್‌ಜಿಓ ನಿರ್ದೇಶಕ ಶರಣಪ್ಪ ಬಿಸರಹಳ್ಳಿ, ಸುರೇಶ್ ಮಾದನೂರ್, ದೈಹಿಕ ಶಿಕ್ಷಣಾಧಿಕಾರಿ ಶರಣಪ್ಪ ವೀರಾಪುರ್, ವಿರುಪಾಕ್ಷಪ್ಪ ಮ್ಯಾಳಿ, ಅನುದಾನಿತ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿದ್ದರೆಡ್ಡಿ, ತಾಲೂಕು ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಜಗದೀಶ್ ಬಳಿಗಾರ್, ಕಾರ್ಯದರ್ಶಿ ಶರಣಪ್ಪ ಜಕ್ಲಿ, ವೆಂಕಟೇಶ್ ಬಂಡಿವಡ್ಡರ್, ಸೋಮಶೇಖರ್ ನಿಲೋಗಲ್, ರಾಜು ಪೂಜಾರ್, ಚಂದ್ರು ದೊಡ್ಡಮನಿ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ವಿವಿಧ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಎಮ್ಮಿಗನೂರು ಗ್ರಾಮದಲ್ಲಿ ಮನೆ ಮನೆಗೆ ತೆರಳಿ ಮತದಾರರ ಪಟ್ಟಿ ಪರಿಷ್ಕರಣೆ



■ **ಗಣಿನಾಡವಾಣಿ ವಾರ್ತೆ, ಕಂಪ್ಲಿ**

ತಾಲೂಕಿನ ಎಮ್ಮಿಗನೂರು ಗ್ರಾಮದಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಒಗಳ ಸಮ್ಮುಖದಲ್ಲಿ ಮನೆ ಮನೆಗೆ ತೆರಳಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯಿತು.

ನಂತರ ಭಾರತೀಯ ಜನತಾ ಪಾರ್ಟಿ ಕಂಪ್ಲಿ ಮಂಡಲದ ಯುವ ಮೋರ್ಚದ ಅಧ್ಯಕ್ಷ ಎಮ್ಮಿಗನೂರು ವಿರೇಶ ಬಡಿಗೇರ್ ಮಾತನಾಡಿ, ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗವೂ ಮತದಾರರ ಪಟ್ಟಿಯಲ್ಲಿರುವ ಕೆಲ ನಕಲಿ ಮತದಾರರನ್ನು ಮತ್ತು ಬೇರೆ ಬೇರೆ ಕಡೆಗಳಲ್ಲಿರುವ ಮತದಾರರನ್ನು ತೆಗೆಯಲು ಮತದಾರರ ಪರಿಷ್ಕರಣೆ(ಎಸ್‌ಐಆರ್) ಮಾಡಲಾಗುತ್ತಿದೆ. ಅಧಿಕಾರಿಗಳು ಪ್ರತಿ ಮನೆಗೂ ಭೇಟಿ ನೀಡಿ ಮತದಾರರ ಪಟ್ಟಿಯನ್ನು ಪರಿಶೀಲನೆ ಮಾಡುತ್ತಿದ್ದಾರೆ. ಇದರಲ್ಲಿ ಹೊಸ ಮತದಾರರ ಸೇರ್ಪಡೆ, ಮೃತಪಟ್ಟವರ ಹಾಗೂ ಸ್ಥಳಾಂತರಗೊಂಡವರ ಹೆಸರುಗಳನ್ನು ಪಟ್ಟಿಯಿಂದ ತೆಗೆದಯ ಹಾಕಲಾಗುತ್ತದೆ. ಪ್ರಜಾಪ್ರಭುತ್ವದ ಯಶಸ್ಸಿಗೆ ನಿಖರವಾದ ಮತದಾರರ ಪಟ್ಟಿ ಅತ್ಯವಶ್ಯಕವಾಗಿದೆ. ರಾಜ್ಯಾದ್ಯಂತ ಆರಂಭವಾಗಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣ ಕಾರ್ಯಕ್ರಮಕ್ಕೆ ಪ್ರತಿಯೊಬ್ಬ 18 ವರ್ಷ ಮೇಲ್ಪಟ್ಟ ಎಲ್ಲಾ ನಾಗರಿಕರು ಸಕ್ರಿಯವಾಗಿ ಭಾಗವಹಿಸಬೇಕು. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಬೇಕು. ಎಸ್‌ಐಆರ್ ಸಮಗ್ರ ಪರಿಷ್ಕರಣ ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಹಕರಿಬೇಕು ಎಂದರು.

ಈ ಸಂದರ್ಭದಲ್ಲಿ ಬಿಎಲ್2 ಅಂಗನವಾಡಿ ಶಿಕ್ಷಕಿ ಜಡೆಮ್ಮ, ಮಂಡಲ ಪ್ರಧಾನ ಕಾರ್ಯದರ್ಶಿ ಫಕೀರಪ್ಪ, ಉಪಾಧ್ಯಕ್ಷ ಶರಣಗೌಡ ಇದ್ದರು.



# ನವ ದಾಂಪತ್ಯಕ್ಕೆ ಕಾಲಿಟ್ಟ ಮೂಕ ವಧು-ವರ : ಮದುವೆ ಸಂಭ್ರಮಕ್ಕೆ ಕಂಪ್ಲಿ ಸಾಕ್ಷಿ







■ **ಗಣಿನಾಡವಾಣಿ ವಾರ್ತೆ, ಕಂಪ್ಲಿ**

ಮದುವೆ ಎಂದರೆ ಅಲ್ಲಿ ಬೀಗರ ಗೌಜು ಗದ್ದಲ ಇದ್ದೇ ಇರುತ್ತದೆ. ಆದರೆ, ಮಾತು ಬೆಳ್ಳಿ, ಮೌನ ಬಂಗಾರ ಎನ್ನುವಂತೆ ಮೂಕ ವಧು-ವರ ಮದುವೆ ಸಂಭ್ರಮಕ್ಕೆ ಪಟ್ಟಣದ ರಾಘವೇಂದ್ರ ಕಲ್ಯಾಣಮಂಟಪ ಶುಕ್ರವಾರ ಸಾಕ್ಷಿಯಾಯಿತು.

ಗ್ರಾಮ, ತಾಲೂಕು, ಜಿಲ್ಲೆ, ರಾಜ್ಯ ಸೇರಿದಂತೆ ನಾನಾ ಭಾಗಗಳಿಂದ ಆಗಮಿಸಿದ್ದ ಮೂಕರು ದಾಂಪತ್ಯ ಜೀವನಕ್ಕೆ ಕಾಲಿಟ್ಟ ನೂತನ ದಂಪತಿಗೆ ಅವರದೇ ಹಾವಭಾವದ ಭಂಗಿಯಲ್ಲಿ ಶುಭ ಹಾರೈಕೆ, ಆಶೀರ್ವಾದ ಮಾಡಿದ ದೃಶ್ಯಗಳು ನೆರೆದ ಜನರನ್ನು ಬೆರಗುಗೊಳಿಸಿದವು.

ಕಂಪ್ಲಿ ತಾಲೂಕಿನ ರಾಮಸಾಗರ ಗ್ರಾಮದ ಹೆಬ್ಬಾಳ್ ಚಂದ್ರಕಲಾ ವೆಂಕಟೇಶ ದಂಪತಿಯ ಪದವೀಧರ ಪುತ್ರ ಹೆಚ್.ನವೀನ್‌ಕುಮಾರ ಹಾಗೂ ಗುಲಬರ್ಗಾ ಜಿಲ್ಲೆಯ ಚಿತ್ತಪುರ ನಗರದ ನಿವಾಸಿ ಈರಮ್ಮ ಬಸಣ್ಣ ಸಿಂಪಿ ಇವರ ಪುತ್ರಿ ವಾಸವಿ(ಉಮಾದೇವಿ) ಇವರ ಮದುವೆ ಸಂಭ್ರಮಕ್ಕೆ ನೂರಾರು ಜನರು ಸಾಕ್ಷಿಯಾದರು.

ಇಲ್ಲಿನ ಕಲ್ಯಾಣಮಂಟಪದಲ್ಲಿ ಎತ್ತ ನೋಡಿದರತ್ತ ಮೂಕರ ಕಲರವ ಕಂಡುಬಂದಿತು. ವಧು-ವರನ ಮೂಕ ಗೆಳೆಯ-ಗೆಳತಿಯರು ಹಾಗೂ ಆಪ್ತ ಮಿತ್ರರು ಸೇರಿದಂತೆ 100ಕ್ಕೂ ಹೆಚ್ಚು ಮೂಕರು ಮದುವೆ ಮುನ್ನಾ ದಿನವಾದ ಗುರುವಾರ ಸಂಜೆಯೇ ಕಲ್ಯಾಣ ಮಂಟಪಕ್ಕೆ ಆಗಮಿಸಿ ವಾಸ್ತವ್ಯ ಹೂಡಿದ್ದರು. ಮರು ದಿನದ ಮದುವೆ ಮುಗಿಯುವ ತನಕ ಗೆಳೆಯನ ಅದ್ದೂರಿ ಮದುವೆ ನಡೆಸಿಕೊಟ್ಟರು. ಮದುವೆ ಬರುವವರನ್ನು ಸ್ವಾಗತಿಸುವುದು, ಊಟದ ವ್ಯವಸ್ಥೆ ನೋಡಿಕೊಳ್ಳುವುದು, ಹೀಗೆ ನಾನಾ ವಿವಿಧ ಮೂಕರು ತಮ್ಮದೇ ಆದ ಕೆಲಸದೊಂದಿಗೆ ನಾವಿದ್ದೇವೆ ಎಂಬ ಭಾವನೆಯೊಂದಿಗೆ ಗೆಳೆಯನ ಮದುವೆಯನ್ನು ಅಚ್ಚುಕಟ್ಟಾಗಿ ನೆರವೇರಿಸಿದರು. ಮದುವೆಯಲ್ಲಿ ಮಾತೇ ವಿರಳ ಎನ್ನುವಂತಿತ್ತು. ಅಲ್ಲಿ ನೆರೆದಿದ್ದ ಮೂಕರೆಲ್ಲರೂ ಕೈ ಸನ್ನೆಗಳ ಮೂಲಕವೇ ಸಂವಹಿಸಿದ್ದಲ್ಲದೇ ಮದುವೆ ಸಿದ್ಧತೆಗಳನ್ನೂ ಮಾಡಿಕೊಳ್ಳುತ್ತಿದ್ದ ದೃಶ್ಯಗಳು ಕಂಡುಬಂದವು.

ಮೂಕ ಗೆಳೆಯ ಗೆಳತಿಯರೇ ಮದುಮಕ್ಕಳನ್ನು ಅಲಂಕರಿಸಿ ಮದುವೆ ಮಂಟಪಕ್ಕೆ ಕರೆ ತಂದರು. ಸರಿಯಾಗಿ ಮಧ್ಯಾಹ್ನ 12.20ಕ್ಕೆ ಮೂಕ ಹಕ್ಕಿಗಳ ಅಕ್ಷತಾರೋಪಣ ನೆರವೇರಿತು. ನಂತರ ವಧು ವರನ ಮೂಕ ಗೆಳೆಯ, ಗೆಳತಿಯರು ತಮ್ಮದೇ ದಾಟಿಯಲ್ಲಿ ನವ ವಿವಾಹಿತರಿಗೆ ಶುಭ ಹಾರೈಸಿದರು. ಹಾಗೆಯೇ ನವ ದಂಪತಿಯೊಂದಿಗೆ ಮೊಬೈಲ್‌ನಲ್ಲಿ ಸೆಲ್ಫಿ ಸಹ ಕ್ಲಿಕ್ಕಿಸಿಕೊಂಡರು. ಅಲ್ಲದೇ ವಿಡಿಯೊ ಕಾಲ್ ಮೂಲಕ ತಮ್ಮ ದೂರದ ಗೆಳೆಯರೊಂದಿಗೆ ಮದುವೆ ಸಂಭ್ರಮವನ್ನು ತಮ್ಮದೆ ಆದ ದಾಟಿಯಲ್ಲಿ ವಿವರಿಸುತ್ತಿದ್ದರು.ಗುರು ಹಿರಿಯರ, ತಂದೆ ತಾಯಿಗಳ ಹಾಗೂ ವಧು-ವರನ ಒಪ್ಪಿಗೆಯ ಮೇರೆಗೆ ಈ ವಿವಾಹ ನೆರವೇರಿತು. ಆರ್ಯವೈಶ್ಯ ಸಮಾಜ(ಶೆಟ್ರು)ದ ವರ ಹೆಚ್.ನವೀನ್ ಕುಮಾರ ಮತ್ತು ವೀರಶೈವ ಸಮಾಜದ ವಧು ವಾಸವಿ ಎಂಬ ಮೂಕ ಹಕ್ಕಿಗಳು ಸುಂದರ ಜೀವನಕ್ಕಾಗಿ ಜಾತಿ, ಭೇಧ ಇಲ್ಲದೇ ಮದುವೆಗೆ ಸಾಕ್ಷಿಯಾದರು. ವರ ನವೀನ್ ಇವರು ಬಳ್ಳಾರಿಯಲ್ಲಿ ಗುರುಗಳಾದ ವೆಂಕಟೇಶ ದೇಶಪಾಂಡೆ ಮತ್ತು ಗೋವಿಂದಪ್ಪ ಅವರ ಮಾರ್ಗದರ್ಶನದಲ್ಲಿ ಹಿರಿಯ ಮತ್ತು ಮೈಸೂರಿನ ಬುದ್ಧಿಮಾಂಧ್ಯ ಶಾಲೆಯಲ್ಲಿ ಪ್ರೌಢ ಹಂತದಿಂದ ಡಿಪ್ಲೋಮಾವರೆಗೆ ಶಿಕ್ಷಣ ಪಡೆದಿದ್ದಾರೆ. ಈಗ ಬೆಂಗಳೂರಿನ ಅಮೆಜಾನ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾರೆ.

ಇಲ್ಲಿನ ಮೂಕ ಹಕ್ಕಿಗಳ ಮದುವೆಗೆ ಶಾಸಕ ಜೆ.ಎನ್.ಗಣೇಶ್ ಅವರ ಸುಪುತ್ರ ಜೆ.ಎನ್.ಗೋಕುಲ್ ಮತ್ತು ಅಳಿಯ ರಾಜೇಶ್‌ಸಿಂಗ್ ಸೇರಿದಂತೆ ಮುಖಂಡರು, ಸಮಾಜದವರು, ಗೆಳೆಯರು ಮೂಕ ವಧು-ವರರಿಗೆ ಆಶೀರ್ವದಿಸಿದರು.

## ಚುಟುಕು ಸುದ್ದಿಗಳು

### ಜು.05 ರಂದು ಬಳ್ಳಾರಿ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11 ಕೆವಿ ಅಲ್ಲಿಪುರ ವಿದ್ಯುತ್ ವಿತರಣಾ ಕೇಂದ್ರದ ಬ್ಯಾಂಕ್–1 ನಿಂದ ವಿದ್ಯುತ್ ಸರಬರಾಜು ಆಗುವ ಎಫ್–72ರ ನಿರ್ವಹಣೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಜುಲೈ 05 ರಂದು ಬೆಳಿಗ್ಗೆ 09 ರಿಂದ ಸಂಜೆ 05 ಗಂಟೆಯವರೆಗೆ ನಗರದ ಕಾಂಟೋನ್ ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಸುಧಾ ಕ್ರಾಸ್, ನಂದಿ ಕಾಲೋನಿ, ಹೆಚ್.ಆರ್.ಜಿ ಕಾಲೋನಿ, ಜಯ ನಗರ, ರಹಿಮಬಾದ್ ಕಾಲೋನಿ, ನಲಂದ ಕಾಲೇಜು, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನಾಥ ಮಂದಿರ, ಭಾಸ್ಕರ ನಾಯ್ಡು ಸ್ಟ್ರೀಟ್, ಸೆಂಟ್ ಜೋಸೆಫ್ ಸ್ಕೂಲ್, ಬೆಳಗಲ್ ಕ್ರಾಸ್, ಚಂದ್ರ ಕಾಲೋನಿ, ಎಂ.ಕೆ ಗಡಂಗ್ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಜುಲೈ 04ರಂದು ವಿಪತ್ತು ನಿರ್ವಹಣೆ ವಿಷಯಗಳ ಕುರಿತು ಸಭೆ

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಜುಲೈ 04ರಂದು ಮಧ್ಯಾಹ್ನ 3ಕ್ಕೆ ರಾಜ್ಯದ ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಜಿ.ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಕಂದಾಯ ವಿಷಯ ಹಾಗೂ ವಿಪತ್ತು ನಿರ್ವಹಣೆ ವಿಷಯಗಳ ಕುರಿತು ಸಭೆ ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

### ಇಂದು ಎಸ್ಐಆರ್ ಜಾಗೃತಿಗಾಗಿ ಸೈಕಲ್ ಜಾಥಾ ಮತ್ತು ವಾಕಥಾನ್

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಭಾರತ ಚುನಾವಣಾ ಆಯೋಗ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ ಸಂಬಂಧ ಅರಿವು ಮೂಡಿಸುವ ಸಲುವಾಗಿ ಇದೇ ಜುಲೈ 04ರಂದು ಬೆಳಿಗ್ಗೆ 8ಕ್ಕೆ ನಗರದ ಜಿಲ್ಲಾ ಪಂಚಾಯತ್ ಆವರಣದಿಂದ ಸೈಕಲ್ ಜಾಥಾ ಹಾಗೂ ವಾಕಥಾನ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್.ಆಕಾಶ್ ತಿಳಿಸಿದ್ದಾರೆ.

### ಜುಲೈ05 ರಂದು "ಕಲಾ ನಡಿಗೆ ನಿಮ್ಮ ಬಳಿಗೆ" ಕಾರ್ಯಕ್ರಮ

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇದೇ ಜುಲೈ 05ರಂದು ಸಂಜೆ 5ಕ್ಕೆ ಚಿತ್ರದುರ್ಗ ನಗರದ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ "ಕಲಾ ನಡಿಗೆ ನಿಮ್ಮ ಬಳಿಗೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಂಗವಾಗಿ ಸಂಗೀತ ಹಾಗೂ ಜಾನಪದ ಕಲಾತಂಡಗಳ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್ ತಿಳಿಸಿದ್ದಾರೆ.

### ಜು.05 ರಂದು ವಿದ್ಯುತ್ ವ್ಯತ್ಯಯ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಫ್–25 ಹಾಗೂ ಎಫ್–46 ಫೀಡರ್ ವ್ಯಾಪ್ತಿಯಲ್ಲಿತುರ್ತುನಿರ್ವಹಣಾಕಾಮಗಾರಿಹಮ್ಮಿಕೊಂಡಿರುವುದರಿಂದ ಜುಲೈ 05 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಏರಿಯಾಗಳು:** ಆರ್.ಕೆ ಮಿಲ್ ರೋಡ್, ಬಾಪೂಜಿ ನಗರ, ಬಾಪೂಜಿ ನಗರ ಸರ್ಕಲ್, ರಾಣಿತೋಟ, ಕಣೆಕಲ್ ಬಸ್ ಸ್ಟ್ಯಾಂಡ್, ದೊಡ್ಡ ಹಾಗೂ ಸಣ್ಣ ಮಾರ್ಕೆಟ್, ಕಾರ್ಕಳ ತೋಟ, ಸಾಯಿ ಕಾಲೋನಿ, ಆರ್.ಆರ್. ಲೇಔಟ್, ಟೋಪಿಗಲ್ಲಿ, ಮರಿಸ್ವಾಮಿ ಮಠ, ಇಂಡಸ್ಟ್ರಿಯಲ್ ಏರಿಯಾ ಹಂತ–1 ಸೇರಿದಂತೆ ಇನ್ನೂ ಮುಂತಾದ ಏರಿಯಾಗಳು. ಹಾಗಾಗಿ ಸಾರ್ವಜನಿಕರು, ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

### ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ ವತಿಯಿಂದ 2026ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಿಸ್ತಿಗಾಗಿ ಅರ್ಜಿ ಆಹ್ವಾನಿಸಿದೆ. ಜುಲೈ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ ಮಕ್ಕಳನ್ನು ಗುರುತಿಸಿ ಆನ್‍ಲೈನ್ ಮೂಲಕ https://awards.gov.in ವೆಬ್‍ಸೈಟ್‍ನಲ್ಲಿ ಜುಲೈ 31ರೊಳಗೆ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ವೆಬ್‍ಸೈಟ್‍ನಲ್ಲಿ ಪಡೆಯಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜುಲೈ 5 ರಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಜಿಲ್ಲಾ ಪ್ರವಾಸ

■ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಜುಲೈ 5ರಂದು ಭಾನುವಾರ ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಬೆಂಗಳೂರಿನಿಂದ ರಸ್ತೆ ಮಾರ್ಗವಾಗಿ ಆಗಮಿಸುವ ಅವರು ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿನ 'ಭದ್ರಾ ಮೇಲ್ದಂಡೆ ಯೋಜನೆ'ಯ ವಿವಿಧ ಪ್ಯಾಕೇಜ್‍ಗಳ ಕಾಮಗಾರಿಗಳನ್ನು ವೀಕ್ಷಿಸುವರು. ಮಧ್ಯಾಹ್ನ 2.30 ಕ್ಕೆ ಅಜ್ಜಂಪುರಕ್ಕೆ ಆಗಮಿಸುವ ಅವರು ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆಯ ವೈ– ಜಂಕ್ಷನ್ ಮತ್ತು ಚಿತ್ರದುರ್ಗ ಶಾಖಾ ಕಾಲುವೆ ಪ್ಯಾಕೇಜ್–4ರ ಬಾಟಲ್‍ನೆಕ್ ಕಾಮಗಾರಿ ಪರಿಶೀಲನೆ ನಡೆಸುವರು. ಸಂಜೆ 4.30ಕ್ಕೆ ಗೋನೂರು ಅಕ್ವೆಡಕ್ಟ್‍ಗೆ ಆಗಮಿಸಿ, ಚಿತ್ರದುರ್ಗ ಶಾಖಾ ಕಾಲುವೆಯ ಪ್ಯಾಕೇಜ್–11 ರ ಕಾಮಗಾರಿಗಳ ವೀಕ್ಷಣೆ ನಡೆಸುವರು. ನಂತರ ಸಂಜೆ 5.30ಕ್ಕೆ ಚಿತ್ರದುರ್ಗದ ಭದ್ರಾ ಮೇಲ್ದಂಡೆ ಯೋಜನೆ ವಲಯ ಕಛೇರಿ ಸಭಾಂಗಣದಲ್ಲಿ ಉನ್ನತಾಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಭೆಯ ಬಳಿಕ ಸಚಿವರು ಚಿತ್ರದುರ್ಗದಿಂದ ರಸ್ತೆ ಮಾರ್ಗವಾಗಿ ಮರಳಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಮನವಿ

■ **ಗಣಿನಾಡವಾಣಿ ವಾರ್ತೆ, ಕೊಪ್ಪಳ**

ರಾಜ್ಯದಲ್ಲಿ ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರುವ ರಜಪೂತ ಸಮಾಜದ ಸಮಗ್ರ ಅಭಿವೃದ್ಧಿಗಾಗಿ ತಕ್ಷಣವೇ ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕೆಂದು ಆಗ್ರಹಿಸಿ ಕೊಪ್ಪಳ ಜಿಲ್ಲಾ ರಜಪೂತ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ, ರಾಜ್ಯದಲ್ಲಿ ಲಕ್ಷಾಂತರ ಜನಸಂಖ್ಯೆ ಹೊಂದಿರುವ ರಜಪೂತ ಸಮಾಜವು ಆರ್ಥಿಕ, ಶೈಕ್ಷಣಿಕ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಹಿಂದುಳಿದಿದ್ದು, ಯುವಜನತೆಗೆ ಸೂಕ್ತ ಪ್ರೋತ್ಸಾಹ ಮತ್ತು ಮಾರ್ಗದರ್ಶನದ ಕೊರತೆಯಿಂದ ಸಮಾಜವು ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಲಾಗಿದೆ.



ಈಗಾಗಲೇ ಕಲಬುರಗಿ ಜಿಲ್ಲಾಡಳಿತದ ಉಸ್ತುವಾರಿಯಲ್ಲಿ ರಜಪೂತ ಸಮಾಜದ ಕೌಟುಂಬಿಕ ಸಮೀಕ್ಷೆ ಹಾಗೂ ಡಿಜಿಟಲ್ ನೋಂದಣಿ ಪ್ರಕ್ರಿಯೆ ಯಶಸ್ವಿಯಾಗಿ ನಡೆದಿದ್ದು, ಅದರ ಸಮಗ್ರ ವರದಿ ಬೆಂಗಳೂರಿನ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ. ಈ ಅಭಿಯಾನದಿಂದ ರಾಜ್ಯದಾದ್ಯಂತ ರಜಪೂತ ಸಮಾಜದ ಸಂಘಟನೆ ಮತ್ತಷ್ಟು ಬಲಗೊಂಡಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಆರಂಭಗೊಂಡಿರುವ ಈ ಪ್ರಕ್ರಿಯೆಗೆ ಪೂರಕವಾಗಿ ಕೊಪ್ಪಳ ಜಿಲ್ಲೆಯ ರಜಪೂತ ಸಮುದಾಯವೂ ಧ್ವನಿಗೂಡಿಸಿದ್ದು, ಸಮಾಜದ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಅಗತ್ಯವಾದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ರಾಜ್ಯ ಸರ್ಕಾರವು ಕೂಡಲೇ ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕು ಎಂದು ಒತ್ತಾಯಿಸಲಾಗಿದೆ.

ಅಲ್ಲದೆ, ಈ ಸಂಬಂಧ ಮುಖ್ಯಮಂತ್ರಿ, ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಹಾಗೂ ಹಿಂದುಳಿದ ವರ್ಗಗಳ ಆಯೋಗಕ್ಕೆ ಜಿಲ್ಲಾಡಳಿತದಿಂದ ತುರ್ತು ಶಿಫಾರಸು ಪತ್ರ ಕಳುಹಿಸುವಂತೆ ಮನವಿಯಲ್ಲಿ ಕೋರಲಾಗಿದೆ.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ರಜಪೂತ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಮರ್ ಸಿಂಗ್ ರಜಪೂತ, ವೇಣುಗೋಪಾಲ್ ಸಿಂಗ್, ಭೀಮಸಿಂಗ್, ನರಪತ್ ಸಿಂಗ್ ಹಾಗೂ ವೀರೇಂದ್ರ ಸಿಂಗ್ ಉಪಸ್ಥಿತರಿದ್ದರು.

# ಕಂಪ್ಲಿ : ಜನತೆಗೆ ಸಂಗೀತದ ರಸದೌತಣ ಉಣಬಡಿಸಿದ ಸುಗಮ ಸಂಗೀತ ಕಾರ್ಯಕ್ರಮ

■ **ಗಣಿನಾಡವಾಣಿ ವಾರ್ತೆ, ಕಂಪ್ಲಿ**

ಜನತೆಗೆ ಸಂಗೀತದ ರಸದೌತಣ ಉಣಬಡಿಸುವ ಜೊತೆಗೆ ಸುಗಮ ಸಂಗೀತ ಕಾರ್ಯಕ್ರಮಗಳು ಕಲಾವಿದರಿಗೆ ವೇದಿಕೆಯನ್ನು ಕಲ್ಪಿಸುತ್ತವೆ ಎಂದು ಸಿದ್ದೇಶ್ವರ ರಂಗ ಸಂಸ ಕಲ್ಚರಲ್ ಟ್ರಸ್ಟ್ ಕಾರ್ಯದರ್ಶಿ ಕುರುಬರ ಹೇಮೇಶ್ವರ ಹೇಳಿದರು.

ತಾಲೂಕಿನ ಎಮ್ಮಿಗನೂರು ಗ್ರಾಮದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಆವರಣದಲ್ಲಿ ಡಾ.ಅಬ್ದುಲ್ ಕಲಾಂ ಎಸ್.ಪಿ ಚಾರಿಟೇಬಲ್ ಫೌಂಡೇಶನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಗುರುವಾರ ಸಂಜೆ ಹಮ್ಮಿಕೊಂಡಿದ್ದ ಸುಗಮ ಸಂಗೀತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಂಸ್ಕೃತಿಯನ್ನು ಬಿಂಬಿರುವ ಮೂಲ ಜನಪದ ಹಾಡುಗಳು ಸುಂದರ ಜೀವನಕ್ಕೆ ನಾಂದಿಯಾಗಿವೆ. ಆಧುನಿಕ ಭಾರತದಲ್ಲಿ ಪೋಷಕರು ಮಕ್ಕಳಿಗೆ ಮೊಬೈಲ್, ಪೆಸ್‍ಬುಲ್, ಗೇಮ್‍ಗಳ ವಾಲುವಂತೆ ಮಾಡುತ್ತಿದ್ದು, ಇದರಿಂದ ಶಿಕ್ಷಣದಿಂದ ಮಕ್ಕಳು ಹಿಂದುಳಿಯುವಂತಾಗಿದೆ. ಆದ್ದರಿಂದ ಮಕ್ಕಳ ಭವಿಷ್ಯಕ್ಕಾಗಿ ಪುಸ್ತಕವೆಂಬ ಶಿಕ್ಷಣವನ್ನು ಕೊಡಿಸಲು ಮುಂದಾಗಬೇಕು ಎಂದರು.



ರಂಗಭೂಮಿ ಕಲಾವಿದ ಶಂಕರ್ ಬಂಡಿ ಪೀರಸಾಬ್ ಕಾರ್ಯಕ್ರಮ ಅಧ್ಯಕ್ಷವಹಿಸಿ ಮಾತನಾಡಿ, ಇಂದಿನ ತಲೆ ಮಾರಿನ ಯುವ ಪೀಳಿಗೆಗೆ ಹಳೆಯ ರಂಗಭೂಮಿ ಕಲಾವಿದರನ್ನು ಗುರುತಿಸಿ ಮಕ್ಕಳಿಗೆ ಪರಿಚಯಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡುತ್ತಿದೆ. ಇವರು ಮಾಡುವ ಸಹಕಾರದಿಂದ ಕಲೆ, ಸಾಹಿತ್ಯ ಮತ್ತು ರಂಗಭೂಮಿ ಕಲೆಗಳನ್ನು ಹೊರ ತರಲು ಸಾಧ್ಯವಾಗುತ್ತದೆ ಎಂದರು.

ನಂತರ ಡಾ.ಅಬ್ದುಲ್ ಕಲಾಂ ಎಸ್.ಪಿ ಚಾರಿಟೇಬಲ್ ಫೌಂಡೇಶನ್ ಕಾರ್ಯದರ್ಶಿ ಹೆಚ್.ಪೀರಾವಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ತಂತ್ರಜ್ಞಾನದ ಯುಗದಲ್ಲಿ ಜನಪರ ಕಲೆಗಳು ಕಣ್ಮರೆಯಾಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಗ್ರಾಮೀಣ ಭಾಗದಲ್ಲಿ ಜನಪದ ಕಲೆ, ಸಾಹಿತ್ಯ, ಸಂಸ್ಕೃತಿ ಉಳಿದಿದೆ. ಸರ್ಕಾರ ಮತ್ತು ಅಧಿಕಾರಿಗಳು ಸುಗಮ ಸಂಗೀತ ಸೇರಿದಂತೆ ಪ್ರತಿಯೊಂದು ಕಲೆಗಳ ಉಳಿವಿಗಾಗಿ ಪಟ್ಟಣ ಮತ್ತು ಗ್ರಾಮೀಣ ಭಾಗದಲ್ಲಿ ಕಾರ್ಯಕ್ರಮಗಳು ಪರಿಚರಿಸಬೇಕು ಎಂದರು.

ಸುಗಮ ಸಂಗೀತ ಕಾರ್ಯಕ್ರಮವನ್ನು ರಾಜ ಎಮ್ಮಿಗನೂರು ಮತ್ತು ತಂಡದವರು ನಡೆಸಿಕೊಟ್ಟರು. ಇಲ್ಲಿನ ಸುಗಮ ಸಂಗೀತ ಕಾರ್ಯಕ್ರಮಕ್ಕೆ ನೆರೆದಿದ್ದ ಜನರು ಮನಸೋತರು.

ಈ ಕಾರ್ಯಕ್ರಮದಲ್ಲಿ ಶಿಕ್ಷಕರಾದ ಭೀಮೇಶ್, ರಮೇಶ, ಅಡಿಗೆ ಸಹಾಯಕ ವಿಜಯ್, ಸಂಗೀತ ಕಲಾವಿಧೆ ಸಂಗೀತ ಗಂಗಾವತಿ, ತಬಲಾ ವಾದಕ ರಾಘವೇಂದ್ರ ಗಂಗಾವತಿ, ಕ್ಯಾಶಿಯೋ ರಾಮ ಕಂಪ್ಲಿ, ನಿರೂಪಣೆ ಮತ್ತು ಸ್ವಾಗತ ರಮೇಶ ಎಮ್ಮಿಗನೂರು, ಡಾ.ಅಬ್ದುಲ್ ಕಲಾಂ ಎಸ್.ಪಿ ಚಾರಿಟೇಬಲ್ ಫೌಂಡೇಶನ್ ಅಧ್ಯಕ್ಷ ಬಿ.ಸಬೀನ್ ಸೇರಿದಂತೆ ಮುಖಂಡರು, ವಿದ್ಯಾರ್ಥಿಗಳು ಇದ್ದರು.

## ತುಂಗಭದ್ರಾ ಜಲಾಶಯದಲ್ಲಿ ನೀರಿನ ಅಭಾವ: ಮುಂಗಾರು ಬೆಳೆಗೆ ನೀರಿಲ್ಲ, ಕುಡಿಯಲು ಮಾತ್ರ ಬಳಕೆ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ತುಂಗಭದ್ರಾ ಜಲಾನಯನ ಪ್ರದೇಶ ವ್ಯಾಪ್ತಿಯಲ್ಲಿ ಪ್ರಸ್ತುತ ತೀವ್ರ ಮಳೆ ಕೊರತೆ ಉಂಟಾಗಿರುವುದರಿಂದ ತುಂಗಭದ್ರಾ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನ ಬೆಳೆಗಳಿಗೆ ಜಲಾಶಯದ ಬಲದಂಡೆ ಮತ್ತು ಎಡದಂಡೆ ನಾಲೆಗಳಲ್ಲಿ ನೀರು ಹರಿಸಲು ಸಾಧ್ಯವಾಗುವುದಿಲ್ಲ.

ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಲು ಸರ್ಕಾರ ಆದೇಶಿಸಿದೆ. ಈ ಹಿನ್ನೆಲೆಯಲ್ಲಿ ಅಚ್ಚುಕಟ್ಟು ಭಾಗದ ಎಲ್ಲಾ ರೈತ ಬಾಂಧವರು ಇಲಾಖೆಯೊಂದಿಗೆ ಸಹಕರಿಸಬೇಕಾಗಿ ಕೋರಲಾಗಿದೆ.ಮುಂಬರುವ ದಿನಗಳಲ್ಲಿ ಜಲಾನಯನ ಪ್ರದೇಶದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಮಳೆಯಾಗಿ ಜಲಾಶಯ ಭರ್ತಿಯಾದಲ್ಲಿ, ನೀರಾವರಿ ಸಲಹಾ ಸಮಿತಿ ಸಭೆಯನ್ನು ಆಯೋಜಿಸಿ ಬೆಳೆಗಳಿಗೆ ನೀರು ಹರಿಸುವ ಕುರಿತು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು. ಈ ಕುರಿತು ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಅಧೀಕ್ಷಕ ಅಭಿಯಂತರರಾದ ಎಸ್.ಬಿ. ಮಲ್ಲಿಗವಾಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕೋರ್ಸುಗಳ ಪ್ರವೇಶಾತಿ ಆರಂಭ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2026–27ನೇ ಶೈಕ್ಷಣಿಕ ಸಾಲಿಗೆ ಜುಲೈ ಆವೃತ್ತಿ ಪ್ರವೇಶಾತಿಗೆ ಯುಜಿಸಿ ಅನುಮೋದಿತ ಶಿಕ್ಷಣಕ್ರಮಗಳಿಗೆ ಆನ್‍ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಸ್ನಾತಕ ಕೋರ್ಸ್‍ಗಳಾದ ಬಿ.ಎ, ಬಿ.ಕಾಂ, ಬಿ.ಎಸ್.ಸಿ, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್.ಡಬ್ಲ್ಯೂ, ಬಿ.ಲಿಬ್.ಐ.ಎಸ್.ಸಿ, ಸ್ನಾತಕೋತ್ತರ ಕೋರ್ಸ್‍ಗಳಾದ ಎಂ.ಎ, ಎಂ.ಕಾಂ., ಎಂ.ಎಸ್.ಸಿ., ಎಂ.ಬಿ.ಎ., ಎಂ.ಲಿಬ್.ಐ.ಎಸ್.ಸಿ, ಎಂ.ಸಿ.ಎ., ಎಂ.ಎಸ್.ಡಬ್ಲ್ಯೂ, ಸರ್ಟಿಫಿಕೇಟ್, ಡಿಪ್ಲೋಮಾ, ಮತ್ತು ಸ್ನಾತಕ ಪೂರ್ವ ಸರ್ಟಿಫಿಕೇಟ್ ಶಿಕ್ಷಣಗಳಿಗೆ ಜೂನ್ 30 ರಿಂದ ಪ್ರವೇಶಾತಿ ಪ್ರಾರಂಭಿಸಲಾಗಿದೆ.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ, ಡಿಫೆನ್ಸ್ ಅಥವಾ ಮಾಜಿ ಸೈನಿಕ ವಿದ್ಯಾರ್ಥಿಗಳು, ಆಟೋ/ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಹಾಗೂ ಕೆಎಸ್‍ಆರ್‍ಟಿಸಿ, ಬಿಎಂಟಿಸಿ, ಎನ್‍ಡಬ್ಲ್ಯೂಕೆಆರ್‍ಟಿಸಿ, ಕೆಕೆಆರ್‍ಟಿಸಿ ನೌಕರರುಗಳಿಗೆ ಬೋಧನಾ ಶುಲ್ಕದಲ್ಲಿ ವಿಶೇಷ ರಿಯಾಯಿತಿ ಸೌಲಭ್ಯವಿರುತ್ತದೆ. ಕೋವಿಡ್‍ನಿಂದ ಮೃತರಾದ ಪೋಷಕರ ಮಕ್ಕಳಿಗೆ, ದೃಷ್ಟಿ ದೋಷವುಳ್ಳ ವಿದ್ಯಾರ್ಥಿಗಳಿಗೆ (ಜಿ.ಎಡ್ ಮತ್ತು ಎಂ.ಬಿ.ಎ. ಕೋರ್ಸ್‍ಗಳನ್ನು ಹೊರತುಪಡಿಸಿ) ಹಾಗೂ ತೃತೀಯ ಲಿಂಗಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಅರ್ಹ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು. ಅರ್ಜಿಗಳನ್ನು ವಿಶ್ವವಿದ್ಯಾನಿಲಯದ ವೆಬ್‍ಸೈಟ್ www.ksoumysuru.ac.in ನಲ್ಲಿ KSOU Admission Portal ಮೂಲಕ ಈ ಪದವಿಗಳಿಗೆ ಆನ್‍ಲೈನ್‍ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಅರ್ಜಿಯನ್ನು ಪರಿಶೀಲಿಸಿದ ನಂತರ ಆನ್‍ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ 080–23158888, 8904036090, 6363390600 ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ವ್ಯಾಸಂಗ (Higher Education) ಮಾಡಲು ಬಯಸುವ ಪರಿಶಿಷ್ಟ ಜಾತಿ (SC) ಮತ್ತು ಪರಿಶಿಷ್ಟ ವರ್ಗದ (ST) ಅರ್ಹ ಅಭ್ಯರ್ಥಿಗಳಿಗೆ "ಡಾ. ಬಿ.ಆರ್. ಅಂಬೇಡ್ಕರ್ ಅಂತರಾಷ್ಟ್ರೀಯ ಶಿಷ್ಯ ವೇತನ" ನೀಡಲಾಗುತ್ತದೆ. ಆನ್‍ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ವತಿಯಿಂದ 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪರಿಶಿಷ್ಟ ಜಾತಿ (SC)ಮತ್ತು ಪರಿಶಿಷ್ಟ ವರ್ಗದ (ST) ಅಭ್ಯರ್ಥಿಗಳಿಗಾಗಿ ಈ ಯೋಜನೆಯಡಿ ಶಿಷ್ಯವೇತನ ಒದಗಿಸಲಾಗುವುದು.ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಸಲ್ಲಿಸಲು ಇಲಾಖೆಯ ಅಧಿಕೃತ ವೆಬ್‍ಸೈಟ್ ವಿಳಾಸ igccd.karnataka.gov.in ಗೆ ಭೇಟಿ ನೀಡಬಹುದು ಎಂದು ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಹಾಗೂ ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜುಲೈ 04, 2026 ರ ಶನಿವಾರ ಬೆಳಿಗ್ಗೆ 11.00 ಗಂಟೆಗೆ ಮೈಸೂರು ರಸ್ತೆಯ ಕೆಂಗೇರಿಯಲ್ಲಿರುವ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಆವರಣದಲ್ಲಿ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಹೆಚ್ಚುತ್ತಿರುವ ಮಾದಕ ವ್ಯಸನ – ನಾಗರಿಕರ ಒಗ್ಗಟ್ಟಿಗೆ ಕರೆ:

ಮಾದಕ ವಸ್ತುಗಳ ಅಂತಾರಾಷ್ಟ್ರೀಯ ಕಳ್ಳಸಾಗಣೆ ಜಾಲವು ಬೃಹತ್ತಾಗಿ ಬೆಳೆಯುತ್ತಿದ್ದು, ಭಾರತದ ಪ್ರಮುಖ ನಗರಗಳಲ್ಲಿ ಮಾದಕ ವಸ್ತುಗಳ ಸೇವನೆಯ ಚಟ ಕ್ರಮೇಣ ಹೆಚ್ಚತೊಡಗಿದೆ.

ದೆಹಲಿ ಮತ್ತು ಮುಂಬೈಗಳಲ್ಲಿ ಅತಿ ಹೆಚ್ಚು ಮಂದಿ ಮಾದಕ ವಸ್ತುಗಳ ದಾಸರಾಗಿದ್ದು, ಇವರ ಸಂಖ್ಯೆ ಪ್ರತಿ ವರ್ಷ ಶೇ. 15% ರಷ್ಟು ಹೆಚ್ಚುತ್ತಿದೆ.

ದುರದೃಷ್ಟವಶಾತ್, 16 ರಿಂದ 20 ವರ್ಷ ವಯಸ್ಸಿನ ಶಾಲಾ–ಕಾಲೇಜು ವಿದ್ಯಾರ್ಥಿಗಳೇ ಈ ಚಟಕ್ಕೆ ಬಲಿಯಾಗುತ್ತಿದ್ದಾರೆ.

ಪ್ರಸ್ತುತ ಮಾದಕ ವಸ್ತುಗಳನ್ನು ಮಾರಾಟ ಮಾಡುವವರಿಗೆ 10 ರಿಂದ 20 ವರ್ಷಗಳ ಶಿಕ್ಷೆ ಹಾಗೂ 1 ರಿಂದ 2 ಲಕ್ಷ ರೂಪಾಯಿ ದಂಡ ವಿಧಿಸುವ ಕಾನೂನು ಜಾರಿಯಲ್ಲಿದ್ದರೂ, ಈ ಜಾಲದ ಪೂರ್ಣ ನಿಗ್ರಹ ಕೇವಲ ಪೊಲೀಸರಿಂದ ಮಾತ್ರ ಸಾಧ್ಯವಿಲ್ಲ.

ಈ ಸಮಸ್ಯೆಯ ನಿವಾರಣೆಗೆ ಸಮಾಜದ ಒಳಿತು ಮತ್ತು ನೆಮ್ಮದಿಯನ್ನು ಬಯಸುವ ಎಲ್ಲಾ ನಾಗರಿಕರು ಸಂಘಟಿತ ಪ್ರಯತ್ನ ನಡೆಸಬೇಕು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ನಾಡೋಜ ಡಾ. ಬಸವಲಿಂಗ ಪಟ್ಟದೇವರು, ಇಳಕಲ್‍ನ ಚಿತ್ತರಗಿ ಶ್ರೀ ವಿಜಯಮಹಾಂತೇಶ್ವರ ಸಂಸ್ಥಾನ ಮಠದ ಪರಮಪೂಜ್ಯ ಶ್ರೀ ಮ.ನಿ.ಪ್ರ. ಗುರುಮಹಾಂತ ಸ್ವಾಮಿಗಳು, ಭಾಲ್ಕಿಯ ಪೂಜ್ಯ ಶ್ರೀ ಶ್ರೀ ಶ್ರೀ ಗುರುಬಸವ ಪಟ್ಟದೇವರು ಹಾಗೂ ಬೆಂಗಳೂರಿನ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಡಾ. ನಿಶ್ಚಲಾನಂದನಾಥ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಕರ್ನಾಟಕ ಸರ್ಕಾರದ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾದ ಶರಣಪ್ಪ ಸಲಾದಪುರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ವ್ಯಸನಮುಕ್ತ ಸಮಾಜ ನಿರ್ಮಾಣದ ಕುರಿತು ಮಾಜಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ್ ಮತ್ತು ಆಳಂದ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಿ.ಆರ್. ಪಾಟೀಲ್ ಅವರು ಸಂದೇಶ ನೀಡಲಿದ್ದಾರೆ.

ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷರಾದ ನಾಡೋಜ ಡಾ. ವೂಡೇ ಪಿ. ಕೃಷ್ಣ ಅವರು ಆಶಯ ನುಡಿಗಳನ್ನಾಡಲಿದ್ದು, ಸಂಸ್ಥೆಯ ಕೋಶಾಧ್ಯಕ್ಷರಾದ ಹೆಚ್.ಬಿ. ದಿನೇಶ್ ಅವರು ಪ್ರತಿಜ್ಞಾ ವಿಧಿ ಬೋಧಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನಿವೃತ್ತ ಐಎಎಸ್ ಅಧಿಕಾರಿ ಹಾಗೂ ರಾಜ್ಯ ಮಾಹಿತಿ ಆಯುಕ್ತರಾದ ಡಾ. ಬಿ.ಆರ್. ಮಮತಾ, ನಿವೃತ್ತ ಉಪನ್ಯಾಸಕರಾದ ಪ್ರೊ. ಜಿ.ಬಿ. ಶಿವರಾಜು ಮತ್ತು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷರಾದ ಶಶಿಧರ್ ಎಸ್. ಕೋಸಂಬೆ ಭಾಗವಹಿಸಲಿದ್ದಾರೆ.

'ವ್ಯಸನಮುಕ್ತ ಸಮಾಜ ಕಟ್ಟೋಣ' ಎಂಬ ಧ್ಯೇಯದೊಂದಿಗೆ ಹಮ್ಮಿಕೊಂಡಿರುವ ಈ ವಿಶೇಷ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಮಾದಕ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕಾಗಿ ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಕಾರ್ಯದರ್ಶಿ ಎಂ.ಸಿ. ನರೇಂದ್ರ ಹಾಗೂ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಕಾರ್ಯದರ್ಶಿ ಎನ್.ಎಸ್. ಮಹೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ಸಲಹೆ : ಮಳೆ ಕೊರತೆ ಹಿನ್ನೆಲೆ 'ಪರ್ಯಾಯ ಬೆಳೆ ಪದ್ಧತಿ' ಅಳವಡಿಕೆಗೆ ಕರೆ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಿರುವ ಹಿನ್ನೆಲೆಯಲ್ಲಿ, ರೈತರು ಆತಂಕಕ್ಕೆ ಒಳಗಾಗದೆ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ಶಿಫಾರಸ್ಸು ಮಾಡಿರುವ 'ಪರ್ಯಾಯ ಬೆಳೆ ಪದ್ಧತಿ'ಯನ್ನು ಅಳವಡಿಸಿಕೊಳ್ಳಬೇಕಾಗಿ ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಕೋರಿದ್ದಾರೆ.

**ಮಳೆ ಅಭಾವ ಮತ್ತು ಬಿತ್ತನೆ ಕುಂಠಿತ:**

ಜಿಲ್ಲೆಯ ವಾರ್ಷಿಕ ವಾಡಿಕೆ ಮಳೆ 599.0 ಮಿ.ಮೀ ಇದ್ದು, ಜೂನ್–30ರ ಅಂತ್ಯದ ವೇಳೆಗೆ 146.1 ಮಿ.ಮೀ ವಾಡಿಕೆ ಮಳೆಗೆ ಎದುರಾಗಿ 140.7 ಮಿ.ಮೀ (ಶೇ.97) ಮಳೆಯಾಗಿದೆ. ಒಟ್ಟಾರೆ ಬಿದ್ದ ಮಳೆಯ ಪ್ರಮಾಣ ಹೆಚ್ಚಾಗಿದ್ದರೂ ಸಹ, ಮಳೆ ದಿನಗಳು ಕಡಿಮೆಯಿರುವುದು, ಹೆಚ್ಚು ದಿನಗಳ ಅಂತರ ಮತ್ತು ಸಮಪ್ರಮಾಣದ ಹಂಚಿಕೆ ಇಲ್ಲದಿರುವುದರಿಂದ ಜಿಲ್ಲೆಯಲ್ಲಿ ಕೇವಲ ಶೇ.24 ರಷ್ಟು ಮಾತ್ರ ಬಿತ್ತನೆಯಾಗಿದೆ.

ವಿಶೇಷವಾಗಿ ಸಂಡೂರು ತಾಲ್ಲೂಕಿನಲ್ಲಿ 221.6 ಮಿ.ಮೀ ವಾಡಿಕೆ ಮಳೆಗೆ ಎದುರಾಗಿ ಕೇವಲ 88.0 ಮಿ.ಮೀ ಮಳೆಯಾಗಿದ್ದು, ಶೇ. 60 ರಷ್ಟು ಮಳೆ ಕೊರತೆ ಉಂಟಾಗಿದೆ. ಉಳಿದ ತಾಲ್ಲೂಕುಗಳಲ್ಲೂ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಿದೆ.

**'ಎಲ್ ನಿನೋ' ಮುನ್ಸೂಚನೆ – ಪರ್ಯಾಯ ಬೆಳೆಗೆ ಒತ್ತು:** ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಪ್ರಸ್ತುತ ವರ್ಷವು 'ಎಲ್ ನಿನೋ' ವರ್ಷವಾಗಿದ್ದು, ಇನ್ನು ಮುಂದೆಯೂ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗುವ ಸಂಭವವಿದೆ. ಹಾಗಾಗಿ ರೈತರು ಸಾಂಪ್ರದಾಯಿಕ ಬೆಳೆಗಳನ್ನೇ ನಂಬಿ ಕೂರದೆ, ತಿಂಗಳು ಮತ್ತು ವಾರವಾರು ಬೀಳುವ ಮಳೆಯ ಪ್ರಮಾಣಕ್ಕೆ ಅನುಗುಣವಾಗಿ ಕೆಳಗಿನ ಪರ್ಯಾಯ ಬೆಳೆಗಳನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಲಾಗಿದೆ.

ಜುಲೈ 3ನೇ ಅಥವಾ 4ನೇ ವಾರದಲ್ಲಿ ಮಳೆಯಾದರೆ ತೊಗರಿ, ಶೇಂಗಾ, ಸಜ್ಜೆ, ಸೂರ್ಯಕಾಂತಿ ಮತ್ತು ನವಣೆ ಬೆಳೆಗಳನ್ನು ಬೆಳೆಯಬಹುದು. ಮೆಕ್ಕೆಜೋಳವನ್ನೂ ಸಹ ಪರಿಗಣಿಸಬಹುದು. ಆಗಸ್ಟ್ 1ನೇ ವಾರದಲ್ಲಿ ಮಳೆಯಾದರೆ ತೊಗರಿ, ಶೇಂಗಾ, ಸಜ್ಜೆ, ಸೂರ್ಯಕಾಂತಿ, ನವಣೆ ಮತ್ತು ರಾಗಿ ಬೆಳೆಗಳಿಗೆ ಆದ್ಯತೆ ನೀಡಬೇಕು.

**ಅಂತರಬೆಳೆ ಪದ್ಧತಿ:** ತೊಗರಿ ಮತ್ತು ಶೇಂಗಾ ಬೆಳೆಯನ್ನು (3:1) ಅನುಪಾತದಲ್ಲಿ ಅಂತರಬೆಳೆಯಾಗಿ ಬೆಳೆಯಲು ವಿಜ್ಞಾನಿಗಳು ಶಿಫಾರಸ್ಸು ಮಾಡಿದ್ದಾರೆ. ನವಣೆ ಮತ್ತು ರಾಗಿ ಬೆಳೆಗಳನ್ನೂ ಪರಿಸ್ಥಿತಿಗೆ ತಕ್ಕಂತೆ ಬಳಸಿಕೊಳ್ಳಬಹುದು. ರೈತ ಬಾಂಧವರು ಹವಾಮಾನದ ವೈಪರೀತ್ಯವನ್ನು ಸಮರ್ಥವಾಗಿ ಎದುರಿಸಲು ಈ ಶಿಫಾರಸ್ಸುಗಳನ್ನು ಕಡ್ಡಾಯವಾಗಿ ಅನುಸರಿಸಬೇಕಾಗಿ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಣಿನಾಡ ವಾಣಿ

04-07-2026
ಶನಿವಾರ

## ಚುಟುಕು ಸುದ್ದಿಗಳು

### ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ಗೌರವಾನ್ವಿತ ರಾಜ್ಯಪಾಲರು



■ ಗಣಿನಾಡವಾಣಿ ವಾರ್ತೆ, ತಿರುಪತಿ

ಆಂಧ್ರಪ್ರದೇಶದ ತಿರುಪತಿಯ ತಿರುಮಲ ವೆಂಕಟೇಶ್ವರ ಸನ್ನಿಧಿಗೆ ಕುಟುಂಬ ಸಮೇತರಾಗಿ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಭೇಟಿ ನೀಡಿ, ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಿರುಮಲ ತಿರುಪತಿ ದೇವಸ್ಥಾನ ಮಂಡಳಿ (ಟಿಟಿಡಿ) ಅಧಿಕಾರಿಗಳು ಮತ್ತು ಅರ್ಚಕರು ರಾಜ್ಯಪಾಲರನ್ನು ಸ್ವಾಗತಿಸಿದರು. ಪೂಜೆಯ ನಂತರ ರಂಗಾನಾಯಕುಲ ಮಂಟಪದಲ್ಲಿ ಶ್ರೀವಾರಿ ವಸ್ತ್ರವನ್ನು ನೀಡಿ ರಾಜ್ಯಪಾಲರನ್ನು ಗೌರವಿಸಿದರು. ನಂತರ ತಿಮ್ಮಪ್ಪ ಸ್ವಾಮಿ ಪ್ರಸಾದವನ್ನು ಗೌರವಾನ್ವಿತ ರಾಜ್ಯಪಾಲರಿಗೆ ದೇವಾಲಯದ ವತಿಯಿಂದ ನೀಡಲಾಯಿತು.

### ಮದ್ಯ ಮಾರಾಟ ನಿಷೇಧ : ಡಿಸಿ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಹೊಸಪೇಟೆ ಉಪವಿಭಾಗದ ಒಟ್ಟು 75 ಸ್ಥಳಗಳಲ್ಲಿ ಇದೇ ಜುಲೈ 5ರವರಿಗೆ ಭೋಟಾ ಮೊಹರಂ ಪಂಜಾಗಳನ್ನು ಕೂಡಿಸಲಾಗುತ್ತಿದ್ದು, ಭೋಟಾ ಮೊಹರಂ ಹಬ್ಬವು ಶಾಂತಿಯುತವಾಗಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಮುಂಜಾಗ್ರತ ಕ್ರಮವಾಗಿ ಜುಲೈ 4 ರಂದು ಬೆಳಗ್ಗೆ 6 ರಿಂದ ಜುಲೈ 5ರ ಬೆಳಗ್ಗೆ 6ಗಂಟೆಯವರೆಗೆ ಮದ್ಯ ಮಾರಾಟ ಮತ್ತು ಸಾಗಣೆ ಮಾಡದಂತೆ ಹಾಗೂ ಮದ್ಯದಂಗಡಿ, ಬಾರ್ ಅಂಡ್ ರೆಸ್ಟೋರೆಂಟ್ ಮುಚ್ಚುವಂತೆ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಅವರು ನಿಷೇಧಾಜ್ಞೆ ಜಾರಿಗೊಳಿಸಿ ಆದೇಶಿಸಿದ್ದಾರೆ.

### ಸರ್ಕಾರಿ ವಿದ್ಯಾರ್ಥಿ ನಿಲಯಕ್ಕೆ ಖಾಸಗಿ ಕಟ್ಟಡ ಮಾಲೀಕರಿಂದ ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಪ್ರಸಕ್ತ ಸಾಲಿನಲ್ಲಿ ಹೊಸಪೇಟೆ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಡಾ. ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ ನಂ-4 ಹೊಸದಾಗಿ ಮಂಜೂರಾಗಿದ್ದು,100ವಿದ್ಯಾರ್ಥಿಗಳವಾಸ್ತವ್ಯಕ್ಕೆಅನುಕೂಲವಾಗುವಂತೆ ಖಾಸಗಿ ಕಟ್ಟಡ ಹೊಂದಿರುವ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಗತ್ಯ ಅಡುಗೆ ಕೋಣೆ , ಡೈನಿಂಗ್ ಹಾಲ್, ವಿದ್ಯಾರ್ಥಿಗಳ ಕೊಠಡಿ, ಆಫೀಸ್ ಕೊಠಡಿ, ಸ್ಟಾಕ್ ಕೊಠಡಿ, ಬೋರವೆಲ್ ವ್ಯವಸ್ಥೆ, ಕಟ್ಟಡದ ಮುಂದೆ ಪಾರ್ಕಿಂಗ್ ವ್ಯವಸ್ಥೆ, ಸ್ನಾನ ಗೃಹ ಮತ್ತು ಶೌಚಾಲಯಗಳನ್ನು ಹೊಂದಿರುವ ಕಟ್ಟಡಗಳಿಗೆ ಇಲಾಖೆಯ ನಿಯಮಾನುಸಾರ ನಿಗದಿ ಪಡಿಸುವ ಮಾಸಿಕ ಬಾಡಿಗೆಯನ್ನು ನೀಡಲಾಗುತ್ತದೆ. ಆಸಕ್ತರು ಕಟ್ಟಡದ ವಿವರಗಳೊಂದಿಗೆ ಒಪ್ಪಿಗೆ ಪತ್ರ ಮತ್ತು ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 9480843076, 9035755173 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಶಾಸಕ ಗಣೇಶ್‌ಗೆ ಸಚಿವ ಸ್ಥಾನ ಲಭಿಸಲೆಂದು ಧೀರ್ಘದಂಡ ನಮಸ್ಕಾರ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಸ್ಥಳೀಯ ಶಾಸಕ ಜೆ.ಎನ್.ಗಣೇಶ್‌ಗೆ ಸಚಿವ ಸ್ಥಾನ ಸಿಗಲೆಂದು, ಕಂಪ್ಲಿ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಉಪಾಧ್ಯಕ್ಷೆ ಶ್ರೀದೇವಿ ಹೊನ್ನಳ್ಳಿ ಇವರು ಪಟ್ಟಣದಲ್ಲಿ ಧೀರ್ಘದಂಡ ನಮಸ್ಕಾರ ಸಲ್ಲಿಸಿದರು.

ಇಲ್ಲಿನ ಉದ್ಭವ ದೇವಸ್ಥಾನದಿಂದ ಶುಕ್ರವಾರ ಬೆಳಗಿನ ಜಾವದಲ್ಲಿ ಧೀರ್ಘದಂಡ ನಮಸ್ಕಾರ ಹಾಕುತ್ತಾ, ನಡುವಲ ಮಸೀದಿ, ಡಾ. ರಾಜಕುಮಾರ ಮುಖ್ಯರಸ್ತೆ ಮೂಲಕ ಗ್ರಾಮದ ದೇವತೆ ಮಾರೆಮ್ಮ ದೇವಸ್ಥಾನವರೆಗೆ ಹಾಕಿದರು. ತನದಂತರ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಶಾಸಕ ಗಣೇಶ್‌ಗೆ ಸಚಿವ ಸ್ಥಾನ ಲಭಿಸಲೆಂದು ಕೋರಿದರು. ತದನಂತರ ಶ್ರೀದೇವಿ ಹೊನ್ನಳ್ಳಿ ಮಾತನಾಡಿ, ಕ್ಷೇತ್ರದಲ್ಲಿ ನಾನಾ ಅಭಿವೃದ್ಧಿ ಕಾರ್ಯಗಳೊಂದಿಗೆ ಜನಪರ ಸೇವೆ ಮಾಡಿದ್ದಾರೆ. ಮತ್ತು ಪ್ರತಿಯೊಂದು ಹಂತದಲ್ಲಿ ಜನರ ಸಂಕಷ್ಟಗಳಿಗೆ ಸ್ಪಂದಿಸಿ, ಸೌಲಭ್ಯಗಳನ್ನು ಕಲ್ಪಿಸುತ್ತಿದ್ದಾರೆ. ಆದ್ದರಿಂದ ಇಂತಹ ಶಾಸಕರಿಗೆ ಸಚಿವ ಸ್ಥಾನ ಸಿಕ್ಕರೆ, ಕ್ಷೇತ್ರ ಸೇರಿದಂತೆ ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಆಗಲು ಸಾಧ್ಯ. ಈ ನಿಟ್ಟಿನಲ್ಲಿ ವರಿಷ್ಠರು, ಹೈಕಮಾಂಡ್ ಗಮನ ಹರಿಸಿ, ಸಚಿವ ಸ್ಥಾನ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಮಹಿಳೆಯರಿದ್ದರು.

### ಇಂದು ವಿದ್ಯುತ್ ವ್ಯತ್ಯಯ

■ ಗಣಿನಾಡವಾಣಿ ವಾರ್ತೆ, ದಾವಣಗೆರೆ

66/11 ಕೆವಿ ದಾವಣಗೆರೆ ವಿದ್ಯುತ್ ವಿತರಣಾಕೇಂದ್ರದಿಂದ ಹೊರುಡುವ ಎಫ್04-ಬಿಟಿ, ಎಫ್11-ಎಎಫ್1 ಫೀಡರ್, ಮಾರ್ಗದ ವ್ಯಾಪ್ತಿಯಲ್ಲಿ ತುರ್ತು ಜಲಸಿರಿ ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ಜುಲೈ 4 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಅಜಾದ್ ನಗರ , ಬಿಡಿ ಲೇ ಔಟ್ ವೆಂಕಭೋವಿ ಕಾಲೋನಿ , ಜೋಗಲ್ ಬಾಬ ಲೇ ಔಟ್ ಮಾಗನಹಳ್ಳಿರೋಡ್ ಸುತ್ತಮುತ್ತ. ಮಂಡಕ್ಕಿಬಟ್ಟಿ, ಕಾರ್‌ಮಾರ್ಕ್ಸ್ ನಗರ, ,ಸಿದ್ದರಾಮೇಶ್ವರಬಡಾವಣೆ ಮತ್ತು ಶಿವಪಾರ್ವತಿನಗರ ಹಾಗೂ ಸುತ್ತಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ಸೋಯಾಬೀನ್ ಕೃಷಿಗೆ ಉತ್ತೇಜನ ನೀಡಲು ರೈತ ಸಂಘದ ಮನವಿ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಜಿಲ್ಲೆಯ ರೈತರ ಹಿತದೃಷ್ಟಿಯಿಂದ ಪರೀಕ್ಷಾರ್ಥವಾಗಿ ಸೋಯಾಬೀನ್ ಬೆಳೆ ಬೆಳೆಯಲು ಅಗತ್ಯ ಸೌಲಭ್ಯಗಳನ್ನು ಒದಗಿಸಿ ಉತ್ತೇಜನ ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬಳ್ಳಾರಿ ಜಿಲ್ಲಾ ಮತ್ತು ತಾಲ್ಲೂಕು ಘಟಕದ ಪದಾಧಿಕಾರಿಗಳು ಕೃಷಿ ಇಲಾಖೆಯ ಉಪ ನಿರ್ದೇಶಕರಿಗೆ ಮನವಿ ಸಲ್ಲಿಸಿದ್ದಾರೆ.

ಜಿಲ್ಲೆಯಲ್ಲಿ ಈ ವರ್ಷ ರೈತರು ಸೋಯಾಬೀನ್ ಬೆಳೆಯ ಬಗ್ಗೆ ಹೆಚ್ಚಿನ ಆಸಕ್ತಿ ತೋರಿಸುತ್ತಿದ್ದು, ಹೊಸ ಬೆಳೆಯಾಗಿ ಇದನ್ನು ಪರಿಚಯಿಸುವ ಉದ್ದೇಶದಿಂದ ಕೃಷಿ ಇಲಾಖೆ ವಿಶೇಷ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.



ಸರ್ಕಾರದ ಅಂಗೀಕೃತ ಸಂಸ್ಥೆಗಳ ಮೂಲಕ ಪ್ರತಿ ಎಕರೆಗೆ 10 ಕೆ.ಜಿ. ಸೋಯಾಬೀನ್ ಬೀಜವನ್ನು ಉಚಿತವಾಗಿ ಅಥವಾ ಸಹಾಯಧನದಡಿ ವಿತರಿಸಬೇಕು. ಜೊತೆಗೆ ಪ್ರತಿ ಎಕರೆಗೆ ಮೂರು ಚೀಲ ಗೊಬ್ಬರವನ್ನು ಒದಗಿಸಿ ರೈತರಿಗೆ ಅಗತ್ಯ ತಾಂತ್ರಿಕ ಮಾರ್ಗದರ್ಶನ ನೀಡಬೇಕು ಎಂದು ಮನವಿ ಮಾಡಲಾಗಿದೆ.

ಸೋಯಾಬೀನ್ ಬೆಳೆಯು ರೈತರಿಗೆ ಉತ್ತಮ ಆದಾಯ ತಂದುಕೊಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಕೃಷಿ ಇಲಾಖೆಯು ಈ ಕುರಿತಂತೆ ಸಕಾರಾತ್ಮಕವಾಗಿ ಸ್ಪಂದಿಸಿ ಅಗತ್ಯ ಕ್ರಮ ಕೈಗೊಂಡು ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ರೈತ ಸಂಘದ ಮುಖಂಡರು ಆಗ್ರಹಿಸಿದ್ದಾರೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಕೃಷ್ಣ ಮೂರ್ತಿ, ತಿಮ್ಮಪ್ಪ, ಗಂಗಾಧರ, ಶಿವರಾಜ್, ತಾಲ್ಲೂಕು ಘಟಕದ ಪದಾಧಿಕಾರಿಗಳು ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

## ಸೀಳು ತುಟಿ ಶಸ್ತ್ರಚಿಕಿತ್ಸೆ ಉಚಿತ ಡಿಹೆಚ್‌ಓ ಡಾ. ಲಿಂಗರಾಜು ಹೇಳಿಕೆ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಸೀಳು ತುಟಿ ಮತ್ತು ಅಂಗುಳ ಹಾಗೂ ಇತರ ಮುಖದ ಶಸ್ತ್ರಚಿಕಿತ್ಸೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಗುತ್ತಿರುವುದು ಬಡ ವರ್ಗದ ಜನರಿಗೆ ತುಂಬಾ ಅನುಕೂಲವಾಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಿಂಗರಾಜು ಹೇಳಿಕೆ ನೀಡಿದರು.

ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆವರಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಡಾ. ಜಯಂತ್ ಿಃಒಖಖ ಫೌಂಡೇಶನ್ ಬೆಂಗಳೂರು, ಇವರ ಸಹಯೋಗದಲ್ಲಿ ಉಚಿತ ತಪಾಸಣೆ ಮತ್ತು ಶಸ್ತ್ರ ಚಿಕಿತ್ಸಾ ಸೇವೆಗಳ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು,

ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಲ್ಲಿ ಸೀಳು ತುಟಿ, ಸೀಳು ಅಂಗುಳ ಮತ್ತು ಮುಖದ ವಿರೂಪಗಳ ಶಸ್ತ್ರ ಚಿಕಿತ್ಸೆಗಳ ಸೇವೆಗಳು ಉಚಿತವಾಗಿ ನೀಡುತ್ತಿರುವುದು ಶ್ಲಾಘನೀಯ. ಇದಕ್ಕಾಗಿ ಸರ್ಕಾರಗಳು ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ಸೀಳು ತುಟಿ ಮತ್ತು ಅಂಗುಳಿನ ಶಸ್ತ್ರ ಚಿಕಿತ್ಸೆಯು ಭ್ರೂಣದ ಬೆಳವಣಿಗೆಯ ಸಮಯದಲ್ಲಿ ಸಂಭವಿಸುವ ತುಟಿ



ಅಥವಾ ಬಾಯಿಯ ಮೇಲ್ಭಾವಣಿಯಲ್ಲಿನ ಬೇರ್ಪಡುವಿಕೆಯನ್ನು ಸರಿಪಡಿಸುವ ಗುರಿಯನ್ನು ಹೊಂದಿದೆ. ಚೀಲೋಪ್ಲಾಸ್ಟಿ (ತುಟಿ ದುರಸ್ತಿ) ಮತ್ತು ಪ್ಯಾಲಟೊ ಪ್ಲಾಸ್ಟಿ (ಅಂಗುಳಿ ದುರಸ್ತಿ) ಸೇರಿದಂತೆ ಶಸ್ತ್ರಚಿಕಿತ್ಸಾ ವಿಧಾನಗಳನ್ನು ಸಾಮಾನ್ಯವಾಗಿ ಜನನದ ಮೊದಲ ವರ್ಷದಲ್ಲಿ ಸಾಮಾನ್ಯ ನೋಟ ಮತ್ತು ಕಾರ್ಯವನ್ನು ಪುನಃಸ್ಥಾಪಿಸಲು ನಡೆಸಲಾಗುತ್ತದೆ. ಯಾವುದೇ ಉಳಿದಿರುವ ವಿರೂಪಗಳನ್ನು ಪರಿಹರಿಸಲು ಮಾತು ಮತ್ತು ನೋಟವನ್ನು ಸುಧಾರಿಸಲು ನಂತರ ಹೆಚ್ಚಿನ ಶಸ್ತ್ರ ಚಿಕಿತ್ಸೆಗಳು ಬೇಕಾಗಬಹುದು ಎಂದರು.

ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಜಂಬಯ್ಯ ಮಾತನಾಡಿ. ಸೀಳು ತುಟಿ ಮತ್ತು ಸೀಳು ಅಂಗುಳವು ಮಗುವಿನ ಮೇಲಿನ ತುಟಿ ಅಥವಾ ಬಾಯಿಯ ಮೇಲ್ಭಾಗದಲ್ಲಿ ತೆರೆಯುವಿಕೆಗಲಾಗಳಿದ್ದು. ಅವು ಗರ್ಭಾಶಯದಲ್ಲಿ ಭ್ರೂಣ ಬೆಳವಣಿಗೆ ಹೊಂದುವಾಗ ರೂಪುಗೊಳ್ಳುವ ಜನ್ಮಜಾತ ಅಸಹಜತೆಗಳು (ಜನ್ಮ ದೋಷಗಳು) ಭ್ರೂಣದ ಬೆಳವಣಿಗೆಯ ಸಮಯದಲ್ಲಿ ಮೇಲಿನ ತುಟಿ ಮತ್ತು ಬಾಯಿಯ ಮೇಲ್ಭಾಗದ ಅಂಗಾಂಶಗಳು ಸರಿಯಾಗಿ ಒಟ್ಟಿಗೆ ಸೇರದಿದ್ದಾಗ ಸೀಳು ತುಟಿ ಮತ್ತು ಸೀಳು ಅಂಗುಳಗಳು ಸಂಭವಿಸುತ್ತವೆ. ಹೆಚ್ಚಿನ ಚಿಕಿತ್ಸೆಗಾಗಿ ಹತ್ತಿರದ ಜಿಲ್ಲಾ ಆಸ್ಪತ್ರೆಗಳಲ್ಲಿ ಸಹ ಈ ಚಿಕಿತ್ಸೆ ಲಭ್ಯವಿರುವುದರಿಂದ ಯಾವುದೇ ರೀತಿ ತೊಂದರೆ ಆಗದಂತೆ ನಿರ್ವಹಣೆ ಮಾಡಬಹುದು ಎಂದರು. ಜಿಲ್ಲೆಯಲ್ಲಿ ಒಟ್ಟು 16 ಫಲನುಭವಿಗಳಿದ್ದು, ಈ ಪೈಕಿ 10 ಫಲನುಭವಿಗಳಿಗೆ ಚಿಕಿತೆ ನೀಡಲಾಗಿದೆ. ಇನ್ನುಳಿದ 06 ಫಲನುಭವಿಗಳಿಗೆ ಚಿಕಿತೆಯನ್ನು ನೀಡಲಾಗುವುದು ಎಂದು ತಿಳಿಸಿದರು.

ಈ ವೇಳೆ ಆರೋಗ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಇದ್ದರು.

## ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ: ಜುಲೈ 29 ರೊಳಗೆ ಅರ್ಜಿ ಸಲ್ಲಿಸಿ : ಸಿಇಓ

■ ಗಣಿನಾಡವಾಣಿ ವಾರ್ತೆ, ದಾವಣಗೆರೆ

ಜಿಲ್ಲೆಯಲ್ಲಿ ಎಸ್.ಐ.ಆರ್. (Special Intensive Revision) ಅಂದರೆ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವು ಈಗಾಗಲೇ ಯಶಸ್ವಿಯಾಗಿ ಆರಂಭಗೊಂಡಿದ್ದು, ಇದರ ಅಂಗವಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಬೃಹತ್ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಅವರು ತಿಳಿಸಿದರು.

ಅವರು ಇಂದು ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಅಂಗವಾಗಿ ಬೂದಾಳು ರಸ್ತೆಯ ಎಸ್ ಸಿ/ಎಸ್ಟಿ ಹಾಸ್ಟೆಲ್ ನಿಂದ ಹೊಂಡದ ಸರ್ಕಲ್ ರವರೆಗೆ ಏರ್ಪಡಿಸಿದ್ದ ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿಶೇಷ ಪರಿಷ್ಕರಣೆ ಪ್ರಕ್ರಿಯೆಯು ಜೂನ್ 30 ರಿಂದ ಜುಲೈ 29 ರವರೆಗೆ ನಡೆಯಲಿದೆ. ಈ ಅವಧಿಯಲ್ಲಿ ಬಿ.ಎಲ್.ಓ (BLO) ಗಳ ಮುಖಾಂತರ ಮನೆ ಮನೆಗೆ ಇನ್ಯೂಮರೇಷನ್ (Enummeration) ಫಾರ್ಮ್‌ಗಳನ್ನು ವಿತರಿಸಲಾಗುತ್ತಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ಈ ಫಾರ್ಮ್ ಅನ್ನು ಕಡ್ಡಾಯವಾಗಿ ತುಂಬಿ ನೀಡಬೇಕಾಗಿದೆ. ಇದನ್ನು ನೀಡದಿದ್ದಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುವುದಿಲ್ಲ ಎಂದು ತಿಳಿಸಿದರು.




ಜಿಲ್ಲೆಯಲ್ಲಿ ಈಗಾಗಲೇ ಶೇ. 97 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, ಶೇ. 54 ರಷ್ಟು ಇನ್ಯೂಮರೇಷನ್ ಫಾರ್ಮ್‌ಗಳನ್ನು ಈಗಾಗಲೇ ವಿತರಿಸಲಾಗಿದೆ. ಸಾರ್ವಜನಿಕರು ಭರ್ತಿ ಮಾಡಿ ನೀಡುವ ಫಾರ್ಮ್‌ಗಳನ್ನು ಡಿಜಿಟಲೈಸ್ ಮಾಡಿ, 'ECINET' ಮೂಲಕ ಅಪ್‌ಲೋಡ್ ಮಾಡಲಾಗುತ್ತದೆ. ಆ ಬಳಿಕ ಮತದಾರರು ತಮ್ಮ ಹೆಸರನ್ನು ಖಚಿತಪಡಿಸಿಕೊಳ್ಳಬಹುದು ಎಂದರು.

ಬೆಂಗಳೂರು ಅಥವಾ ಇತರೆಡೆ ಉದ್ಯೋಗದ ನಿಮಿತ್ತ ಹೊರಗಿರುವವರ ಪರವಾಗಿ, ಅವರ ಮನೆಯಲ್ಲಿರುವ 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಸಹಿ ಮಾಡಿ ಬಿ.ಎಲ್.ಓ ಗಳಿಗೆ ಫಾರ್ಮ್ ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

ಮತದಾರರ ಅನುಕೂಲಕ್ಕಾಗಿ ನಗರ ಪ್ರದೇಶದಲ್ಲಿ 60 ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 194 'ವೋಟರ್ ಫೆಸಿಲಿಟೇಶನ್ ಸೆಂಟರ್' (ಮತದಾರರ ಸಹಾಯ ಕೇಂದ್ರ) ಗಳನ್ನು ತೆರೆಯಲಾಗಿದೆ. ಯಾವುದೇ ಗೊಂದಲಗಳಿದ್ದಲ್ಲಿ ಸಾರ್ವಜನಿಕರು ನೇರವಾಗಿ ಗ್ರಾಮ ಪಂಚಾಯಿತಿ ಅಥವಾ ಆಯಾ ವಾರ್ಡ್‌ಗಳಲ್ಲಿರುವ ಸಹಾಯ ಕೇಂದ್ರಗಳನ್ನು ಸಂಪರ್ಕಿಸಬಹುದು.

ಫಾರ್ಮ್ ಜೊತೆಗೆ ಯಾವುದೇ ದಾಖಲೆಗಳ ಅಗತ್ಯವಿರುವುದಿಲ್ಲ, ಆದರೆ ತಿದ್ದುಪಡಿ ಅಥವಾ ಸಮಸ್ಯೆಗಳಿದ್ದಲ್ಲಿ ಮಾತ್ರ 11 ಅಧಿಕೃತ ದಾಖಲೆಗಳಲ್ಲಿ ಒಂದನ್ನುಬಳಸಬಹುದು ಎಂದು ಸ್ಪಷ್ಟಪಡಿಸಲಾಗಿದೆ. ಜುಲೈ 29 ರ ಕೊನೆಯ ದಿನಾಂಕದೊಳಗಾಗಿ ಸಾರ್ವಜನಿಕರು ಜವಾಬ್ದಾರಿಯಿಂದ ತಮ್ಮ ಫಾರ್ಮ್‌ಗಳನ್ನು ಬಿ.ಎಲ್.ಓ ಗಳಿಗೇ ನೇರವಾಗಿ ತಲುಪಿಸಬೇಕು ಎಂದು ತಿಳಿಸಿದರು.

ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರೇಣುಕ, ಹಿರಿಯ ನಾಗರೀಕರ ಮತ್ತು ವಿಕಲಚೇತನರ ಅಧಿಕಾರಿ ರಶ್ಮಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಸಿದ್ದಲಿಂಗೇಶ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರ ಕುಮಾರ್, ಸಹಾಯಕ ಕೃಷಿ ನಿರ್ದೇಶಕ ಶ್ರೀಧರ ಮೂರ್ತಿ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ನವೀನ್ ಮಠದ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾಲೇಜು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

## ಶಾಲಾ ಅವಧಿಯಲ್ಲಿ ಬೋಧನೆಗೆ ಪ್ರಥಮ ಆದ್ಯತೆ : ಶಿಕ್ಷಕರಿಗೆ ತರಬೇತಿ, ಸಭೆ ಹಾಗೂ ಇತರೆ ಕಾರ್ಯಗಳಿಗೆ ನಿಯೋಜನೆ ನಿಷೇಧ

■ ಗಣಿನಾಡವಾಣಿ ವಾರ್ತೆ, ದಾವಣಗೆರೆ

ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶಗಳನ್ನು ಸುಧಾರಿಸಲು ಮತ್ತು ಶಾಲಾ ಅವಧಿಯಲ್ಲಿ ಗುಣಮಟ್ಟದ ಬೋಧನೆಗೆ ಸಂಪೂರ್ಣ ಆದ್ಯತೆ ನೀಡುವ ನಿಟ್ಟಿನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಶಿಕ್ಷಣದ ಹಕ್ಕು ಕಾಯಿದೆಯಡಿ ಪ್ರತಿದಿನ ಶಾಲಾ ಹಂತದಲ್ಲಿ ನಿರಂತರ ಬೋಧನೆ ಮತ್ತು ಕಲಿಕೆ ನಡೆಯುವುದನ್ನು ಖಚಿತಪಡಿಸಿಕೊಳ್ಳಲು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ವಿ. ರಶ್ಮಿ ಮಹೇಶ್ ಅವರು ರಾಜ್ಯ ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಪಾಲಿಸಬೇಕಾದ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ಜಾರಿಗೊಳಿಸಿದ್ದಾರೆ.

ಶಾಲಾ ದಿನಗಳಲ್ಲಿ ಹಾಗೂ ಶಾಲಾ ಸಮಯದಲ್ಲಿ ಯಾವುದೇ ಶಿಕ್ಷಕರನ್ನು ಅಥವಾ ಮುಖ್ಯೋಪಾಧ್ಯಾಯರನ್ನು ತರಬೇತಿ ಕಾರ್ಯಕ್ರಮ, ಕಾರ್ಯಾಗಾರ, ಸಭೆ ಅಥವಾ ಇತರೆ ಚಟುವಟಿಕೆಗಳಿಗೆ ಮೌಖಿಕ ಅಥವಾ ಲಿಖಿತ ಆದೇಶಗಳ ಮೂಲಕ ನಿಯೋಜನೆ (OOD) ಮಾಡಬಾರದು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೂ ಸಹ ಇಂತಹ ಯಾವುದೇ ನಿರ್ದೇಶನಗಳನ್ನು ನೀಡುವಂತಿಲ್ಲ.

ಶಾಲಾ ಸಮಯದಲ್ಲಿ ಶಿಕ್ಷಕರ ಮತ್ತು ಮುಖ್ಯೋಪಾಧ್ಯಾಯರ ಯಾವುದೇ ಸಭೆಗಳನ್ನು ಕರೆಯುವಂತಿಲ್ಲ ಅಥವಾ ವಿಡಿಯೋ ಕಾನ್ಫರೆನ್ಸ್ (Video Conference) ನಡೆಸುವಂತಿಲ್ಲ. ಶಾಲೆಗಳಿಗೆ ಭೇಟಿ ನೀಡುವ ಅಧಿಕಾರಿಗಳು ತರಗತಿಗಳ ಬೋಧನೆಗೆ ಯಾವುದೇ ತೊಂದರೆಯಾಗದಂತೆ ನಡೆದುಕೊಳ್ಳತಕ್ಕದ್ದು.

ಯಾವುದೇ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳನ್ನು ಶಾಲೆಯ ಹೊರಗಡೆ ನಡೆಯುವ ವಿವಿಧ ಕಾರ್ಯಕ್ರಮಗಳಿಗೆ ಪ್ರೇಕ್ಷಕರಾಗಿ ಭಾಗವಹಿಸಲು ಕರೆದುಕೊಂಡು ಹೋಗಬಾರದು ಮತ್ತು ಆ ರೀತಿಯ ನಿರ್ದೇಶನಗಳನ್ನು ನೀಡಬಾರದು.

ಶಾಲಾ ದಿನಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗ (KPSC), ಇತರ ರಾಜ್ಯ/ಕೇಂದ್ರ ಸರ್ಕಾರ ಅಥವಾ ಖಾಸಗಿ ಸಂಸ್ಥೆಗಳು ನಡೆಸುವ ಯಾವುದೇ ಬಾಹ್ಯ ಪರೀಕ್ಷೆಗಳನ್ನು ಶಾಲಾ ಆವರಣದಲ್ಲಿ ನಡೆಸಲು ಅವಕಾಶವಿರುವುದಿಲ್ಲ. ಇಂತಹ ಪರೀಕ್ಷೆಗಳನ್ನು ನಡೆಸಲು ಕೇವಲ ಸಾರ್ವಜನಿಕ ರಜೆ ಅಥವಾ ಬೇಸಿಗೆ ರಜೆಯ ಸಮಯದಲ್ಲಿ ಮಾತ್ರ ನಿಯಮಗಳಂತೆ ಅವಕಾಶ ನೀಡಬಹುದು. ಈ ನಿಬಂಧನೆ ಉಲ್ಲಂಘಿಸುವ ಅಧಿಕಾರಿಗಳು ಮತ್ತು ಮುಖ್ಯೋಪಾಧ್ಯಾಯರ ವಿರುದ್ಧ ಕಠಿಣ ಶಿಸ್ತು ಕ್ರಮ ಜರುಗಿಸಲಾಗುವುದು.

ಖಾಸಗಿ ಸಂಸ್ಥೆಗಳ ಅಥವಾ ಯಾವುದೇ ಜ್ಞಾನ ಪಾಲುದಾರರ ಸಾಫ್ಟ್‌ವೇರ್‌ಗಳಲ್ಲಿ ಡೇಟಾ ಎಂಟ್ರಿ ಮಾಡುವಂತೆ ಶಿಕ್ಷಕರಿಗೆ ಅಥವಾ ಮುಖ್ಯೋಪಾಧ್ಯಾಯರಿಗೆ ಇಲಾಖೆಯ ಯಾವುದೇ ಮಟ್ಟದ ಅಧಿಕಾರಿಗಳು ಮೌಖಿಕ ಅಥವಾ ಲಿಖಿತ ಆದೇಶ ನೀಡುವಂತಿಲ್ಲ. ಆದೇಶ ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಈ ಎಲ್ಲಾ ಮಾರ್ಗಸೂಚಿಗಳು ಮತ್ತು ನಿರ್ದೇಶನಗಳು ತಕ್ಷಣದಿಂದಲೇ ಜಾರಿಗೆ ಬರಲಿದ್ದು, ಇಲಾಖೆಯ ಆಯುಕ್ತರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಉಪನಿರ್ದೇಶಕರು (DDPI), ಕ್ಷೇತ್ರ ಶಿಕ್ಷಣಾಧಿಕಾರಿಗಳು (BEO)ಮತ್ತು ಡಯಟ್ ಪ್ರಾಂಶುಪಾಲರು ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಸುತ್ತೋಲೆ ಹೊರಡಿಸಿದ್ದಾರೆ.

## ದಾವಣಗೆರೆ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಚುರುಕು : ಮನೆ ಮನೆಗೆ ಬಿಎಲ್‌ಒಗಳ ಭೇಟಿ ಪ್ರಾರಂಭ

■ ಗಣಿನಾಡವಾಣಿ ವಾರ್ತೆ, ದಾವಣಗೆರೆ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಾವಣಗೆರೆ ಜಿಲ್ಲೆಯಾದ್ಯಂತ 'ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಎಸ್.ಐ.ಆರ್. ಪ್ರಕ್ರಿಯೆ ಅತ್ಯಂತ ಚುರುಕಿನಿಂದ ಸಾಗುತ್ತಿದೆ. ಜಿಲ್ಲೆಯ ಒಟ್ಟು 7 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಜೂನ್ 30 ರಿಂದಲೇ ಬೂತ್ ಮಟ್ಟದ ಅಧಿಕಾರಿಗಳು ಎನುಮೆರೇಷನ್ ನಮೂನೆಗಳೊಂದಿಗೆ ಮತದಾರರ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಜಿ. ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಜೂನ್ 16ರ ವರೆಗಿನ ಅಂಕಿ-ಅಂಶಗಳಂತೆ ಜಿಲ್ಲೆಯಲ್ಲಿ ಒಟ್ಟು 14,99,282 ಮತದಾರರಿದ್ದಾರೆ. ಮತದಾರರ ನಿಖರ ಮಾಹಿತಿ ಪಡೆಯಲು ಈಗಾಗಲೇ 8,99,435 ಎನುಮೆರೇಷನ್ ನಮೂನೆಗಳನ್ನು ಬಿಎಲ್‌ಒಗಳ ಮೂಲಕ ಸಾರ್ವಜನಿಕರಿಗೆ ವಿತರಿಸಲಾಗಿದ್ದು, ಈ ಪೈಕಿ 38,003 ನಮೂನೆಗಳ ಗಣಕೀಕರಣ ಪ್ರಕ್ರಿಯೆಯೂ ಪೂರ್ಣಗೊಂಡಿದೆ.ಕ್ಷೇತ್ರವಾರು ಮಾಹಿತಿ ಮತ್ತು ಪ್ರಗತಿ ವಿವರ: ಜಗಳೂರು: 2,00,836 ಒಟ್ಟು ಮತದಾರರಿದ್ದು, 1,27,608 ನಮೂನೆಗಳನ್ನು ವಿತರಿಸಲಾಗಿದೆ. ಹರಿಹರ: 2,11,023 ಮತದಾರರಿದ್ದು, 1,55,143 ನಮೂನೆಗಳನ್ನು ಹಂಚಿಕೆ ಮಾಡಲಾಗಿದೆ. ಸ್ಥಳಾಂತರ, ವಲಸೆ ಹಾಗೂ ಮರಣ ಪ್ರಕರಣಗಳ ಪತ್ತೆ: ಮನೆ ಮನೆ ಭೇಟಿಯ ಸಂದರ್ಭದಲ್ಲಿ ಬಿಎಲ್‌ಒಗಳು ಮತದಾರರ ವಿವರಗಳನ್ನು ಸೂಕ್ಷ್ಮವಾಗಿ ಪರಿಶೀಲಿಸುತ್ತಿದ್ದಾರೆ. ಜುಲೈ 1ರ ವರೆಗಿನ ವರದಿಯ ಪ್ರಕಾರ, ಜಿಲ್ಲಾದ್ಯಂತ ಒಟ್ಟು 421 ವಿಶೇಷ ಪ್ರಕರಣಗಳನ್ನು ಗುರುತಿಸಲಾಗಿದೆ. ಇದರಲ್ಲಿ 188 ಮರಣ ಹೊಂದಿದ ಪ್ರಕರಣಗಳು, 153 ಶಾಶ್ವತವಾಗಿ ವಲಸೆ ಹೋದವರು, 71 ದ್ವಿಪ್ರತಿ (Duplicate) ಮತದಾರರು ಹಾಗೂ 5 ಅಪೂರ್ಣ ಮಾಹಿತಿ ಇರುವ ಪ್ರಕರಣಗಳು ಸೇರಿವೆ. ಈ ಪ್ರಕ್ರಿಯೆಯು ಜುಲೈ 29, 2026 ರವರೆಗೆ ಮುಂದುವರಿಯಲಿದ್ದು, ಸಾರ್ವಜನಿಕರು ಬೂತ್ ಮಟ್ಟದ ಅಧಿಕಾರಿಗಳಿಗೆ ಸೂಕ್ತ ಮಾಹಿತಿ ನೀಡಿ ಸಹಕರಿಸಬೇಕೆಂದು ಕೋರಿದೆ.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.